MAA ಫ್ರೆಂಡ್ಸ್ ಸಾರಥ್ಯದಲ್ಲಿ...

ಇಂದು 79th ಸ್ವಾತಂತ್ರ್ಯ ದಿನ

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 273 | ಶುಕ್ರವಾರ : 15-08-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 273 | FRIDAY : 15-08-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ದರ್ಶನ್, ಪವಿತ್ರಾಗೌಡ ಸೇರಿ 7 ಆರೋಪಿಗಳ ಜಾಮೀನು ರದ್ದು:ಸುಪ್ರೀಂ ಮಹತ್ವದ ಆದೇಶ



**ನವದೆಹಲಿ,ಆ.14–**ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ನಟ ದರ್ಶನ್, ಪವಿತ್ರಾಗೌಡ ಸೇರಿದಂತೆ ಎಲ್ಲ 7 ಮಂದಿ ಆರೋಪಿಗಳಿಗೆ ಕರ್ನಾಟಕ ಹೈಕೋರ್ಟ್ ನೀಡಿದ್ದ ಜಾಮೀನನ್ನು ಸುಪ್ರೀಂಕೋರ್ಟ್ ರದ್ದುಪಡಿಸಿದೆ. ಹೀಗಾಗಿ ಕಾನೂನು ಸಮರದಲ್ಲಿ ದರ್ಶನ್ ಹಾಗೂ ಇತರ 7 ಮಂದಿ ಆರೋಪಿಗಳಿಗೆ ಭಾರಿ ಹಿನ್ನಡೆಯಾಗಿದೆ. ಈ ಹಿನ್ನೆಲೆಯಲ್ಲಿ ದರ್ಶನ್ ಹಾಗೂ ಇತರರು ಜೈಲುಪಾಲಾಗಲಿದ್ದಾರೆ.

ಆರೋಪಿಯಾಗಿರುವ ನಟ ದರ್ಶನ್, ಪವಿತ್ರಾಗೌಡ ಹಾಗೂ ಇತರ ಆರೋಪಿಗಳನ್ನು ತಕ್ಷಣ ವಶಕ್ಕೆ ಪಡೆಯುವಂತೆ (2ನೇ ಪುಟಕ್ಕೆ)

## ಜಿಲ್ಲಾಸ್ಪತ್ರೆಗಾಗಿ ಅಧಿವೇಶನದಲ್ಲಿ ನಿವೇದನೆ ಮಾಡಿಕೊಂಡ ಶಾಸಕ ಮಾನಪ್ಪ ವಜ್ಜಲ್

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಆ.14–** ಸರ್ಕಾರ ಕಳೆದ ಬಜೆಟ್ ನಲ್ಲಿ 200 ಹಾಸಿಗೆಗಳ ಜಿಲ್ಲಾಸ್ಪತ್ರೆಯನ್ನು ಮಂಜೂರು ಮಾಡಿ ಆದೇಶ ಮಾಡಿದ್ದರು. ಇದಕ್ಕೆ ನಮ್ಮ ತಾಲೂಕಿನ ಜನತೆ ಪಟಾಕಿ ಸಿಡಿಸಿ, ಸಿಹಿ ಹಂಚಿ ಖುಷಿ ಪಟ್ಟಿದ್ದೆವು ಆದರೆ ಸರ್ಕಾರ ಏಕಾ ಏಕಿ ಆಸ್ಪತ್ರೆಯನ್ನು ಸಿಂಧನೂರಿಗೆ ವರ್ಗಾವಣೆ ಮಾಡಿದ್ದು ತಪ್ಪು ನಮ್ಮಲ್ಲಿ ಸಾಕಷ್ಟು ಸಮಸ್ಯೆಗಳಿವೆ ಆದ್ದರಿಂದ ಮತ್ತೆ ಜಿಲ್ಲಾ ಆಸ್ಪತ್ರೆಯನ್ನು ಕೊಡಿ ಎಂದು ಬೆಂಗಳೂರಿನಲ್ಲಿ ನೆಡದ ಮಳೆಗಾಲದ ಅಧಿವೇಶನದಲ್ಲಿ ಲಿಂಗಸುಗೂರು ಕ್ಷೇತ್ರದ ಶಾಸಕ ಮಾನಪ್ಪ ವಜ್ಜಲ್ ಸರ್ಕಾರಕ್ಕೆ ಮನವಿ ಮಾಡಿಕೊಂಡರು.

ಬೆಂಗಳೂರಿನಲ್ಲಿ ನಡೆದ ಅಧಿವೇಶನದಲ್ಲಿ ಮಾತನಾಡಿ, ಲಿಂಗಸುಗೂರು ಮೀಸಲು ಕ್ಷೇತ್ರ, ಬಡ ಜನರು ವಾಸಮಾಡುವ ಕ್ಷೇತ್ರವಾಗಿದೆ ಹಾಗೂ ಕ್ಷೇತ್ರಕ್ಕೆ ಆದ ಅನ್ಯಾಯವನ್ನು ಎಳೆ ಎಳೆಯಾಗಿ ಬಿಚ್ಚಿಡುತ್ತ ಸರ್ಕಾರದ ಮಲತಾಯಿ ದೋರಣೆಯನ್ನು ಖಂಡಿಸಿದರು, ನೀವು ಬೇಕಾದರೆ ಸಿಂಧನೂರಿಗೆ ಮತ್ತೊಂದು ಆಸ್ಪತ್ರೆ ಕೊಡಿ



ನಮಗೆ ಘೋಷಣೆ ಮಾಡಿದ ಆಸ್ಪತ್ರೆಯನ್ನೇ ಏಕೆ ವರ್ಗಾವಣೆ ಮಾಡಿದ್ದು, ನಮಗೆ ಮತ್ತೆ ಜಿಲ್ಲಾಸ್ಪತ್ರೆ ಕೊಡಿ ಎಂದು ಸರ್ಕಾರದ ಮುಂದೆ ಕೈಮುಗಿದೆ ಅಂಗಲಾಚಿ ಕೇಳಿಕೊಂಡರು.

## ಡಾ.ವಿಷ್ಣುವರ್ಧನರವರ ಸ್ಮಾರಕವನ್ನು ಮರು ನಿರ್ಮಾಣ ಮಾಡುವಂತೆ ಮನವಿ

ಯುವ ಮಾರ್ಗ ಸುದ್ದಿ

**ಮಾನ್ವಿ,ಆ.14–** ಪಟ್ಟಣದ ತಹಸೀಲ್ದರ್ ಕಚೇರಿ ಆವರಣದಲ್ಲಿ ಕನ್ನಡ ಸೇನೆ-ಕರ್ನಾಟಕ ತಾಲೂಕು ಘಟಕದ ವತಿಯಿಂದ ಮುಖ್ಯಮಂತ್ರಿಗಳಿಗೆ ತಹ ಸೀ ಲ್ದಾರ್ ಭೀಮರಾಯ.ಬಿ.ರಾಮಸಮುದ್ರರವರ ಮೂಲಕ ಮನವಿ ಸಲ್ಲಿಸಿ ತಾ.ಅಧ್ಯಕ್ಷ ಬಸವರಾಜ ಮೈಲಾರಿ ಮಾತನಾಡಿ, ಬೆಂಗಳೂರಿನ ಅಭಿಮಾನ ಸ್ಟುಡಿಯೋದಲ್ಲಿ ಇದ್ದ ಕನ್ನಡ ನಾಡು, ನುಡಿಗಾಗಿ, ಅಪಾರವಾದ ಸೇವೆಯನ್ನು ಸಲ್ಲಿಸಿದ ಚಲನಚಿತ್ರ ನಟ ಡಾ.ವಿಷ್ಣುವರ್ಧನರವರ ಸ್ಮಾರಕವನ್ನು ಧ್ವಂಸ ,ಮಾಡಿರುವುದು ಸರಿಯಲ್ಲ ಇದ್ದ



ರಿಂದ ಡಾ.ವಿಷ್ಣುವರ್ಧನ ರವರ ಅಭಿಮಾನಿಗಳಿಗೆ ಹಾಗೂ ಕನ್ನಡಿಗರಿಗೆ ಅತೀವ ನೋವುಂಟು ಮಾಡಿದ್ದು ಕೂಡಲೇ ಸರ್ಕಾರವೇ ಡಾ.ವಿಷ್ಣುವರ್ಧನರವರ ಸ್ಮಾರಕವನ್ನು ಮರು ನಿರ್ಮಾಣ ಮಾಡುವುದಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

## ಖಾಲಿ ಉಳಿದ ಶಿಕ್ಷಕರ ಹುದ್ದೆಗಳಿಗೆ ಅತಿಥಿ ಶಿಕ್ಷಕರ ನೇಮಕಾತಿಗೆ ಒತ್ತಾಯ

ಯುವ ಮಾರ್ಗ ಸುದ್ದಿ

**ದೇವದುರ್ಗ,ಆ.14–** ದೇವದುರ್ಗ ತಾಲ್ಲೂಕಿನಲ್ಲಿ ಖಾಲಿ ಇರುವ 110 ಶಿಕ್ಷಕರ ಹುದ್ದೆಗಳಿಗೆ ಮತ್ತು ಇತ್ತೀಚೆಗೆ ನಿವೃತ್ತರಾದ ಶಿಕ್ಷಕರ ಸ್ಥಾನಗಳಿಗೆ ತಕ್ಷಣವೇ ಅತಿಥಿ ಶಿಕ್ಷಕರನ್ನು ನೇಮಿಸಬೇಕು ಎಂದು ಕರ್ನಾಟಕ ರಾಜ್ಯ ಅತಿಥಿ ಶಿಕ್ಷಕರ ಸಂಘ ಸರ್ಕಾರವನ್ನು ಒತ್ತಾಯಿಸಿದೆ. ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಈ ಕ್ರಮ ಅಗತ್ಯ ಎಂದು ಸಂಘ ಹೇಳಿದೆ.

ತಾಲ್ಲೂಕಿನಲ್ಲಿ ಒಟ್ಟು 1,441 ಶಿಕ್ಷಕರ ಹುದ್ದೆಗಳು ಮಂಜೂರಾಗಿದ್ದು, ಕೇವಲ 563 ಶಿಕ್ಷಕರು ಮಾತ್ರ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇದರ ಪರಿಣಾಮ ವಾಗಿ, ಬರೋಬ್ಬರಿ 878 ಹುದ್ದೆಗಳು ಖಾಲಿ ಇವೆ. ಸರ್ಕಾರವು ಈ ಪೈಕಿ 768 ಹುದ್ದೆಗಳಿಗೆ ಅತಿಥಿ ಶಿಕ್ಷಕರ ನೇಮಕಾತಿಗೆ ಅನುಮತಿ ನೀಡಿದೆ. ಆದರೆ ಇನ್ನೂ 110 ಹುದ್ದೆಗಳು ಖಾಲಿ ಉಳಿದಿವೆ.



ಈ ಬಗ್ಗೆ ಮಾತನಾಡಿದ ಸಂಘದ ಅಧ್ಯಕ್ಷ ರಂಗಪ್ಪನಾಯಕ ಗೋಪಾಳಪುರ, "ಖಾಲಿ ಉಳಿದಿರುವ ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಕ ಮಾಡುವುದರಿಂದ ಶೈಕ್ಷಣಿಕ ಚಟುವಟಿಕೆಗಳಿಗೆ ಯಾವುದೇ ತೊಂದರೆಯಾಗುವುದಿಲ್ಲ. ಇದರ ಜೊತೆಗೆ, ಶಾಲೆಯಿಂದ ಹೊರಗುಳಿದಿರುವ ಅತಿಥಿ ಶಿಕ್ಷಕರಿಗೂ ನ್ಯಾಯ ಒದಗಿಸಿದಂತಾಗುತ್ತದೆ" ಎಂದು ಹೇಳಿದರು. ಈ ಸಂಬಂಧ ಕ್ಷೇತ್ರ ಶಿಕ್ಷಣಾದಿಕಾರಿಗಳ ಮೂಲಕ ಸರ್ಕಾರಕ್ಕೆ ಪತ್ರ ಬರೆಯುವುದಾಗಿ ಅವರು ತಿಳಿಸಿದರು. ಈ ಸಂದರ್ಭದಲ್ಲಿ ಸಂಘದ ಸದಸ್ಯರಾದ ಬುದ್ದಯನಾಯಕ, ಶರಣಬಸವ, ಮಂಜುನಾಥ ಮತ್ತು ಇತರರು ಉಪಸ್ಥಿತರಿದ್ದರು.

## ಬಿ.ಗಣೇಕಲ್ ಗ್ರಾಮದ ಸರ್ಕಾರಿ ಶಾಲೆಯ ಮಕ್ಕಳಿಗೆ ದೇಣಿಗೆ ಸಂಗ್ರಹಿಸಿ ಸಮವಸ್ತ್ರ ವಿತರಣೆ



ಯುವ ಮಾರ್ಗ ಸುದ್ದಿ

**ಅರಕೇರಾ,ಆ.14–** ತಾಲೂಕಿನ ಬಿ.ಗಣೇಕಲ್ ಗ್ರಾಮದ ಸರಕಾರಿ ಪ್ರಾಥಮಿಕ ಶಾಲೆಯ ಆಂಗ್ಲ ಮಾಧ್ಯಮದ ಎಲ್ ಕೆಜಿ ಯುಕೆಜಿ ಮಕ್ಕಳಿಗೆ ಸ್ವಾತಂತ್ರ್ಯ ದಿನಾಚರಣೆಯ ಪ್ರಯುಕ್ತ ಬಿ.ಗಣೇಕಲ್ ಹಳೆಯ ವಿದ್ಯಾರ್ಥಿ ಬಳಗದ ವತಿಯಿಂದ ಸಮವಸ್ತ್ರ ವಿತರಿಸುವ ಕಾರ್ಯಕ್ರಮ ಆಯೋಜಿಸಿಲಾಗಿತ್ತು.

ಶಾಲೆಯ ಎಲ್ಲಾ ಹಳೆಯ ವಿದ್ಯಾರ್ಥಿಗಳಿಂದ ದೇಣಿಗೆಯನ್ನು ಸಂಗ್ರಹಿಸಿ ಶಾಲಾ ಮಕ್ಕಳಿಗೆ ಸಮವಸ್ತ್ರ ನೀಡಲಾಗಿದೆ ಈ ಸಂದರ್ಭದಲ್ಲಿ ಶಾಲೆ ಮುಖ್ಯೋಪಾಧ್ಯಯರು ಬಸವರಾಜ ಸ್ವಾಮಿ ಮಾತನಾಡಿ ಊರಿನ ಹಳೆಯ ವಿಧ್ಯಾರ್ಥಿ ಬಳಗದ ವತಿಯಿಂದ ಹಿಂದೆ ಸ್ವಚ್ಛತೆ, ಪರಿಸರ ಕುರಿತು ನಮ್ಮ ಶಾಲೆಯ ಏಳಿಗೆಗಾಗಿ ಬಹಳಷ್ಟು ಕಾಳಜಿ ತೋರಿಸಿ ಶಾಲೆಯ ಕುಂದು ಕೊರತೆಗಳ ಬಗ್ಗೆ ಸಹಕಾರ ನೀಡಿದ್ದಕ್ಕೆ ಧನ್ಯವಾದಗಳನ್ನು ತಿಳಿ ಸಿದ್ದರು.

ಅದೆ ರೀತಿ ಇಂದು ನಮ್ಮ ಶಾಲೆಯ ಆಂಗ್ಲ ಮಾಧ್ಯಮದ ಮಕ್ಕಳಿಗೆ ಸಮವಸ್ತ್ರ ವಿತರಿಸಿದ್ದು ತುಂಬಾ ಸಂತೋಷದ ವಿಷಯ ಆದ್ದರಿಂದ ಮಕ್ಕಳು ಕೂಡ ಈ ಸಮವಸ್ತ್ರವನ್ನು ತೆಗೆದುಕೊಂಡು ಪ್ರತಿದಿನ ಶಾಲೆಗೆ ಬರಬೇಕೆಂದು ಮಕ್ಕಳಿಗೆ ತಿಳಿಸಿದರು ಈ ಕಾರ್ಯಕ್ರಮದಲ್ಲಿ ಶಾಲೆ ಸುಧಾರಣೆ ಸಮಿತಿ ಅಧ್ಯಕ್ಷರು, ಪಧಾಧಿಕಾರಿಗಳು ಶಾಲೆಯ ಸಿಬ್ಬಂದಿ ವರ್ಗದವರು,ಊರಿನ ಪಾಲಕರು ಹಾಗೂ ಮುದ್ದು ಮಕ್ಕಳು ಇದ್ದರು.

## ಜಿಲ್ಲಾಧಿಕಾರಿ ನಿತೀಶ್ ಕೆ ಅವರಿಗೆ ಉತ್ತಮ ಕಾರ್ಯ ಸಾಧನೆಗಾಗಿ ರಾಜ್ಯ ಸರ್ಕಾರದಿಂದ ಮತ್ತೊಂದು ಅಭಿನಂದನಾ ಪತ್ರ

ಯುವ ಮಾರ್ಗ ಸುದ್ದಿ

**ರಾಯಚೂರು,ಆ.14–** ರಾಯಚೂರ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಅಟಲ್‌ಜೀ ಜನಸ್ನೇಹಿ ಕೇಂದ್ರ ಯೋಜನೆಯಡಿ ರಾಯಚೂರು ಜಿಲ್ಲೆಯಲ್ಲಿ ಉತ್ತಮ ಕಾರ್ಯ ಸಾಧನೆ ಮಾಡಿದ್ದರಿಂದಾಗಿ ಕಂದಾಯ ಇಲಾಖೆಯ ಆಯುಕ್ತರು ಅಭಿನಂದನಾ ಪತ್ರ ಕಳುಹಿಸಿದ್ದಾರೆ.

ಅಟಲ್‌ಜೀ ಜನಸ್ನೇಹಿ ಕೇಂದ್ರ ಯೋಜನೆಯಡಿ ರಾಜ್ಯದ ಸಾರ್ವಜನಿಕರಿಗೆ ವಿವಿಧ ಪ್ರಮಾಣ ಪತ್ರಗಳ ಸೇವೆಯನ್ನು ನೀಡಲು ರಾಯಚೂರು ಜಿಲ್ಲೆಯ ನಾಡ ಕಚೇರಿಗಳಲ್ಲಿ ಜುಲೈ-2025ರ ಮಾಹೆಯಲ್ಲಿ ಸ್ವೀಕರಿಸಲಾಗಿರುವ 48,649 ಅರ್ಜಿಗಳನ್ನು ನಿಗದಿತ ಅವಧಿಗಿಂತ ಮೊದಲೇ ಶೇ.99.61ರಷ್ಟು ವಿಲೇವಾರಿ ಮಾಡಿ 5.32 ಸಿಗ್ಮಾ ಮೌಲ್ಯವನ್ನು ಪಡೆದಿರುತ್ತೀರಿ. 7.10 ವಿಲೇವಾರಿ ಸೂಚ್ಯಂಕದ ಪ್ರಕಾರ ತಮ್ಮ ಜಿಲ್ಲೆಯಲ್ಲಿ 8.10 ಪಟ್ಟು ನಿಗದಿತ ಅವಧಿಗಿಂತ ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಿ (2ನೇ ಪುಟಕ್ಕೆ)



## ಅಂಗನವಾಡಿ ಕೇಂದ್ರದ ಮುಂದೆ ಮಳೆ ನೀರು: ಮಕ್ಕಳ ಪರದಾಟ

ಯುವ ಮಾರ್ಗ ಸುದ್ದಿ

**ಗಬ್ಬೂರು,ಆ.14–** ದೇವದುರ್ಗ ತಾಲೂಕಿನ ಹೇಮನಾಳ ಗ್ರಾಪಂ ವ್ಯಾಪ್ತಿಯ ಹಿರೇ ಕೂಡ್ಲಿಗಿ ಗ್ರಾಮದವರಲ್ಲಿರುವ ಅಂಗನವಾಡಿ ಶಾಲೆಯ ಸುತ್ತಲು ಕಳೆದ ಮೂರು ದಿನಗಳಿಂದ ಸುರಿದ ಮಳೆಯಿಂದ ನೀರು ಆವೃತ್ತವಾಗಿ ಮಕ್ಕಳು ಶಾಲೆಗೆ ಹೋಗಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ.

ಕಳೆದ ಹಲವು ವರ್ಷಗಳಿಂದ ಅಂಗನವಾಡಿ ಶಾಲೆಗೆ ಕಾಂಪೌಂಡ್ ನಿರ್ಮಾಣ ಹಾಗೂ ಅಂಗನವಾಡಿ ಮುಂದೆ ಮರಂ ಹಾಕಿಸಿ ಅಂತ ಅಂಗನವಾಡಿ ಟೀಚರ್, ಮಹಿಳಾ ಮತ್ತು ಮಕ್ಕಳ ಕಲ್ಯಾಣಾಧಿಕಾರಿಗಳು ಹಾಗೂ ಊರಿನ ಮುಖಂಡರು ಗ್ರಾಮ ಪಂಚಾಯತಿ ಪಿಡಿಓ ಅವರಿಗೆ ಮನವಿ ಸಲ್ಲಿಸಿದ್ದರೂ ಕೂಡ ಇದುವರೆಗೆ ಪಿಡಿಓ ಅವರಿಂದ ಸ್ಪಂದನೆ ಇಲ್ಲ.



ಶಾಲೆಯ ಸುತ್ತಲು ಕಾಂಪೌಂಡ್ ನಿರ್ಮಾಣ ಮಾಡದೇ ಇರುವುದು ಮಳೆಯ ನೀರು ಶಾಲಾ ಆವರಣದ ಒಳಗೆ ಶೇಖರಣೆಯಾಗಲು ಕಾರಣವಾಗಿದೆ.

ನಿಂತು ನೀರುಹರಿದುಹೋಗಲು ಸ್ಥಳವೇ ಇಲ್ಲ. ಶಾಲೆಯ ಮುಂಭಾಗದಲ್ಲೇ ಆಳಾವಾದ ತಗ್ಗು ಇದ್ದು ತಗ್ಗಿನಲ್ಲಿ ಮಳೆಯ ನೀರು ಶೇಖರಣೆಯಾಗಿದೆ. ಅದ್ದರಿಂದ ಚಿಕ್ಕ ಚಿಕ್ಕ ಮಕ್ಕಳು ಹೋಗಲು ಆಗುತ್ತಿಲ್ಲ ಅಂಗನವಾಡಿ ಕೇಂದ್ರ ಮಳೆ ನೀರು ನಿಂತಿರುವದ್ದರಿಂದ ಶಾಲೆಗೆ ಬೀಗ ಹಾಕಲಾಗಿದೆ ಕೂಡಲೇ ಮೇಲಾಧಿಕಾರಿಗಳು ಎಚ್ಚತ್ತುಕೊಂಡು ಈ ಸಮಸ್ಯೆಗೆ ಶಾಶ್ವತ ಪರಿಹಾರ ನೀಡಬೇಕೆಂದು ಹಿರೇಕೂಡ್ಲಿಗಿ ಗ್ರಾಮಸ್ಥರ ಆಗ್ರಹವಾಗಿದೆ.

## ದಲಿತರಿಗೆ ಹಂಚಿಕೆಯಾದ ಜಮೀನನ್ನು ಕೂಡಲೇ ಬಿಟ್ಟುಕೊಡಿ: ಬಸವರಾಜ ಬಾಗಲವಾಡ ಒತ್ತಾಯ



ಯುವ ಮಾರ್ಗ ಸುದ್ದಿ

**ಮಾನ್ವಿ,ಆ.14–**ತಾಲೂಕಿನ ಈರಲಗಡ್ಡಿ ಗ್ರಾಮದ ಸರ್ವೆ ನಂ. 29/1 ರಲ್ಲಿ ದಲಿತರಿಗೆ ಹಂಚಿಕೆಯಾದ ಜಮೀನನ್ನು ಕೂಡಲೇ ಆ ಫಲಾನುಭವಿಗಳಿಗೆ ಹಸ್ತಾಂತರಿಸಬೇಕು ಎಂದು ಪ್ರಗತಿಪರ ಸಂಘಟನೆಗಳ ವೇದಿಕೆಯ ಸಂಚಾಲಕ ಬಸವರಾಜ ಬಾಗಲವಾಡ ಒತ್ತಾಯಿಸಿದ್ದಾರೆ.

ಪಟ್ಟಣದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಈ ವಿಷಯ ತಿಳಿಸಿದ್ದಾರೆ. ತಡಕಲ್ ಗ್ರಾಮದ ಸರ್ವೆ ನಂ. 164 ರಲ್ಲಿ ಕಳೆದ 30 ವರ್ಷಗಳಿಂದ ಸಾಗುವಳಿ ಮಾಡುತ್ತಿರುವ ರೈತರಿಗೆ ಕೂಡಲೇ ಹಕ್ಕುಪತ್ರ ವಿತರಿಸಬೇಕು ಎಂದು ಆಗ್ರಹಿಸಿದರು. ಇದರ ಜೊತೆಗೆ, ಉಟಕನೂರು ಮತ್ತು ಮುದ್ದಮಗುಡ್ಡಿ ಗ್ರಾಮಗಳಲ್ಲಿನ ಸಾರ್ವಜನಿಕ ಸ್ಮಶಾನವನ್ನು ಹದ್ದುಬಸ್ತು ಮಾಡಿಕೊಡುವಂತೆ ಕೋರಿದರು.

ಮೈಸೂರು ಗೆಜೆಟ್ ಪ್ರಕಾರ, 76/3/1 ವಿತರಣಾ ಕಾಲುವೆಯ ನೀರನ್ನು ರೈತರಿಗೆ ಸರಿಯಾಗಿ ಹಂಚಿಕೆ ಮಾಡಬೇಕು ಎಂದು ಅವರು ಒತ್ತಾಯಿಸಿದರು. ಒಂದು ವೇಳೆ ಈ ಬೇಡಿಕೆಗಳನ್ನು ಸರ್ಕಾರ ಈಡೇರಿಸದಿದ್ದರೆ, ಮುಂದಿನ ದಿನಗಳಲ್ಲಿ ತಮ್ಮ ಸಂಘಟನೆಯ ವತಿಯಿಂದ ತೀವ್ರ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಅವರು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಬುಡ್ಡಪ್ಪನಾಯಕ, ಶರಣಬಸವ ನಾಯಕ, ಹಂಪಯ್ಯ ಈರಲ ಗಡ್ಡಿ, ಕಿರಣಕುಮಾರ ಉದ್ಬಾಳ್, ಶಿವಮಹಾಂತೇಶನಕ್ಕುಂದಿ, ಸಂಗನಬಸವ ಹಿರೇಬಾದರದಿನ್ನಿ, ಚಿದಾನಂದಸ್ವಾಮಿ ನಾಯಕ, ಬಸವನಗೌಡ, ಹುಸೇನಪ್ಪ ನಂದಿಹಾಳ ಇದ್ದರು

## ಮೊದಲನೇಯ ಪುಟದಿಂದ

# ದರ್ಶನ್, ಪವಿತ್ರಾಗೌಡ ಸೇರಿ 7 ಆರೋಪಿಗಳ ಜಾಮೀನು ರದ್ದು:ಸುಪ್ರೀಂ ಮಹತ್ವದ ಆದೇಶ

ಅಧಿಕಾರಿಗಳಿಗೆ ಸುಪ್ರೀಂಕೋರ್ಟ್ ಸೂಚಿಸಿದ್ದು, ಈ ಪ್ರಕರಣದ ವಿಚಾರಣೆಯನ್ನು ತ್ವರಿತವಾಗಿ ನಡೆಸುವಂತೆ ಸುಪ್ರೀಂಕೋರ್ಟ್‌ನ ನ್ಯಾಯಮೂರ್ತಿಗಳಾದ ಜೆ.ಬಿ ಪಾರ್ದಿವಾಲಾ ಹಾಗೂ ಆರ್. ಮಹದೇವನ್ ಅವರಿದ್ದ ದ್ವಿಸದಸ್ಯ ನ್ಯಾಯಪೀಠ ನಿರ್ದೇಶನ ನೀಡಿದೆ.

ದರ್ಶನ್ ಪ್ರಕರಣದಲ್ಲಿ ಕರ್ನಾಟಕ ಹೈಕೋರ್ಟ್ ನೀಡಿರುವ ಆದೇಶದಲ್ಲಿ ಹಲವು ನ್ಯೂನ್ಯತೆಗಳಿವೆ ಎಂದು ಹೇಳಿರುವ ನ್ಯಾಯಪೀಠ, ಎಲ್ಲ 7 ಮಂದಿ ಆರೋಪಿಗಳಿಗೆ ನೀಡಿರುವ ಜಾಮೀನು ರದ್ದುಗೊಳಿಸಿರುವುದಾಗಿ ತಿಳಿಸಿದೆ.ನಾವು ಎಲ್ಲ ವಿಚಾರಗಳನ್ನು ಗಂಭೀರವಾಗಿ ಪರಿಗಣಿಸಿದ್ದೇವೆ. ಹೈಕೋರ್ಟ್ ಆದೇಶವು ಗಂಭೀರ ದೌರ್ಬಲ್ಯಗಳಿಂದ ಕೂಡಿರುವುದು ಸ್ಪಷ್ಟವಾಗಿದೆ ಎಂದು ನ್ಯಾಯಪೀಠ ಹೇಳಿದೆ.

ದರ್ಶನ್ ಜತೆ ಪವಿತ್ರಾಗೌಡ, ಎ–6 ಜಗದೀಶ್ ಅಲಿಯಾಸ್ ಜಗ್ಗ, ಎ–7 ಅನುಕುಮಾರ್ ಅಲಿಯಾಸ್ ಅನು, ಎ–14 ಪ್ರದೂಷ್, 1–11 ನಾಗರಾಜ್ ಅಲಿಯಾಸ್ ನಾಗ, ಎ–12 ಲಕ್ಷ್ಮಣ್ ಜಾಮೀನು ಕೂಡ ಸುಪ್ರೀಂಕೋರ್ಟ್ ರದ್ದುಪಡಿಸಿದೆ.ಆರೋಪಿ ಎಷ್ಟೇ ದೊಡ್ಡವರಿದ್ದರೂ ಕಾನೂನಿಗಿಂತ ದೊಡ್ಡವರಲ್ಲ ಎಂದಿರುವ ಸುಪ್ರೀಂಕೋರ್ಟ್, ಜೈಲಿನಲ್ಲಿ ಆರೋಪಿಗಳಿಗೆ ಐಷಾರಾಮಿ ಸೇವೆ ಒದಗಿಸಿರುವ ಬಗ್ಗೆಯೂ ಗರಂ ಆಗಿರುವ ನ್ಯಾಯಪೀಠ, ಈ ವಿಚಾರದಲ್ಲಿ ಜೈಲು ಸೂಪರಿಂಟೆಂಡೆಂಟ್ ಅವರನ್ನು ಅಮಾನತು ಮಾಡಬೇಕಾಗಿತ್ತು ಎಂದು ನ್ಯಾಯಪೀಠ ಹೇಳಿದೆ.ಜೈಲಿನಲ್ಲಿ ನಟ ದರ್ಶನ್‌ಗೆ ಐಷಾರಾಮಿ ಸೌಲಭ್ಯ ಕಲ್ಪಿಸಿರುವ ವಿಚಾರವನ್ನು ಗಂಭೀರವಾಗಿ ಪರಿಗಣಿಸಿರುವ ಸುಪ್ರೀಂಕೋರ್ಟ್, ಇಂತಹ ಫೋಟೊ, ವೀಡಿಯೊಗಳು ಕಂಡುಬಂದರೆ ಗೃಹ ಇಲಾಖೆ ಸುಪ್ರೀಂಕೋರ್ಟ್‌ಗೆ ಕರೆಸಬೇಕಾಗುತ್ತದೆ ಎಂದು ನ್ಯಾಯಪೀಠ ಖಡಕ್ ಎಚ್ಚರಿಕೆ ನೀಡಿದೆ.

ಇನ್ನು ಮುಂದೆ ಜೈಲಿನೊಳಗೆ ಐಷಾರಾಮಿ ಸೌಲಭ್ಯ ನೀಡುವುದು ಕಂಡು ಬಂದರೆ ಜೈಲು ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳುವುದಾಗಿ ಸುಪ್ರೀಂಕೋರ್ಟ್ ತಾಕೀತು ಮಾಡಿದೆ.ತೀರ್ಪಿನ ಬಗ್ಗೆ ಪ್ರತಿಕ್ರಿಯೆ ನೀಡಿರುವ ಸರ್ಕಾರದ ಪರ ವಕೀಲರು ನಾವು ಕಲೆ ಹಾಕಿದ ಸಾಕ್ಷ್ಯವನ್ನು ಸುಪ್ರೀಂಕೋರ್ಟ್ ಒಪ್ಪಿದ್ದು, ಇದು ಮಹತ್ವದ ತೀರ್ಪಾಗಿದೆ.

ನಟ ದರ್ಶನ್ ಜೈಲಿನಲ್ಲಿ ನಡೆಸಿದ ಐಷಾರಾಮಿ ಜೀವನ ಹೊರಬಂದ ಬಳಿಕ ನಡೆದುಕೊಂಡ ರೀತಿಯನ್ನು ನಾವು ಸುಪ್ರೀಂಕೋರ್ಟ್‌ಗೆ ಮನವರಿಕೆ ಮಾಡಿಕೊಟ್ಟಿದ್ದೆವು ಎಂದು ಹೇಳಿದರು.ಕಳೆದ ವರ್ಷ ಜೂ. 11 ರಂದು ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ದರ್ಶನ್ ಅವರನ್ನು ಬಂಧಿಸಲಾಗಿತ್ತು. 4 ತಿಂಗಳಿಗೂ ಅಧಿಕ ಕಾಲ ಅವರು ಸೆರೆ ವಾಸದಲ್ಲಿರಬೇಕಾಗಿತ್ತು. ಬೆನ್ನು ನೋವಿನ ಕಾರಣ ನೀಡಿ ಜೈಲಿನಿಂದ ಹೊರಬಂದಿದ್ದರು.

ಡಿಸೆಂಬರ್‌ನಲ್ಲಿ ಆವರಿಗೆ ಜಾಮೀನು ಲಭಿಸಿತ್ತು. ಈ ತೀರ್ಪನ್ನು ಪ್ರಶ್ನಿಸಿ ರಾಜ್ಯಸರ್ಕಾರ ಸುಪ್ರೀಂಕೋರ್ಟ್‌ಗೆ ಮೊರೆ ಹೋಗಿತ್ತು.ಹಲವು ದಿನಗಳ ಕಾಲ ಸುಪ್ರೀಂಕೋರ್ಟ್‌ನಲ್ಲಿ ವಾದ–ಪ್ರತಿವಾದ್ದಾ ಆಲಿಸಿದ ನ್ಯಾಯಪೀಠ ತೀರ್ಪನ್ನು ಕಾಯ್ದಿರಿಸಿತ್ತು.ಕರ್ನಾಟಕ ಹೈಕೋರ್ಟ್ ಜಾಮೀನು ನೀಡಿದ ಕಾರಣಗಳ ಬಗ್ಗೆ ಸುಪ್ರೀಂಕೋರ್ಟ್ ಅಸಮಾಧಾನ ಹೊರ ಹಾಕಿತ್ತು. ಈಗ ಸುಪ್ರೀಂಕೋರ್ಟ್ ತೀರ್ಪು ನೀಡಿದ್ದು, ದರ್ಶನ್ ಅವರಿಗೆ ಜಾಮೀನು ಮಂಜೂರು ಮಾಡಿದ್ದರ ಬಗ್ಗೆ ಈ ಹಿಂದೆ ಸುಪ್ರೀಂಕೋರ್ಟ್ ರಾಜ್ಯಹೈಕೋರ್ಟ್‌ಗೆ ಛೀಮಾರಿ ಹಾಕಿತ್ತು.

**ಸತ್ಯ ಎಲ್ಲಕ್ಕಿಂತ ಶಕ್ತಿಶಾಲಿ: ಪವಿತ್ರಾ:** ರೇಣುಕಾಸ್ವಾಮಿ ಕೊಲೆ ಆರೋಪದಲ್ಲಿ ಆರೋಪಿಯಾಗಿರುವ ಪವಿತ್ರಾಗೌಡ ತೀರ್ಪು ಹೊರ ಬರುವ ಮುನ್ನ ಸತ್ಯ ಎಲ್ಲಕ್ಕಿಂತ ಶಕ್ತಿಶಾಲಿ. ಅದು ನ್ಯಾಯ ಕೊಡುತ್ತೆಎಂದು ಪವಿತ್ರಾಗೌಡ ಪೋಸ್ಟ್ ಒಂದನ್ನು ಹಂಚಿಕೊಂಡಿದ್ದರು.

ಈ ಪೋಸ್ಟ್‌ನಲ್ಲಿ ಯಾವಾಗಲು ನ್ಯಾಯವನ್ನು ಕೊಡುತ್ತವೆ. ಈ ಜಗತ್ತಿನಲ್ಲಿರುವ ಎಲ್ಲಕ್ಕಿಂತ ಹೆಚ್ಚಿನ ಶಕ್ತಿಯನ್ನು ಸತ್ಯ ಹೊಂದಿರುತ್ತದೆ. ಎಷ್ಟೇ ಸಮಯ ತೆಗೆದುಕೊಂಡರೂ ನ್ಯಾಯವೂ ಯಾವಾಗಲು ತನ್ನ ದಾರಿಯನ್ನು ಕಂಡುಕೊಳ್ಳುತ್ತದೆ ಎಂದು ಬರೆದುಕೊಂಡಿದ್ದಾರೆ.

**ಪ್ರಕರಣ ನಡೆದಿದ್ದು ಹೇಗೆ?**: 2024ರ ಜೂ. 8 ರಂದು ರೇಣುಕಾಸ್ವಾಮಿ ಹತ್ಯೆ

2024ರ ಜೂ. 11 ರಂದು ಹತ್ಯೆಯ ಆರೋಪದ ಮೇಲೆ ದರ್ಶನ್ ಮತ್ತವರ ತಂಡ ಬಂಧನ

ದರ್ಶನ್ ಗೆಳತಿ ಪವಿತ್ರಾಗೌಡ ಅವರಿಗೆ ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಅಶ್ಲೀಲ ಸಂದೇಶ ಕಳುಹಿಸಿರುವ ಆರೋಪ. ಈ

ಹಿನ್ನೆಲೆಯಲ್ಲಿ ರೇಣುಕಾಸ್ವಾಮಿ ಹತ್ಯೆ ನಡೆದಿದೆ ಎಂಬ ಗಂಭೀರ ಆರೋಪ.

ಬೆಂಗಳೂರಿನ ಪರಪ್ಪನ ಅಗ್ರಹಾರ ಸೇರಿದ ನಟ ದರ್ಶನ್

ಸೆಂಟ್ರಲ್ ಜೈಲಿನಲ್ಲಿ ನಟ ದರ್ಶನ್‌ಗೆ ರಾಜಾತಿಥ್ಯ ನೀಡಿರುವ ಆರೋಪ, ಫೋಟೊ ವೈರಲ್

ಬಳ್ಳಾರಿ ಕೇಂದ್ರ ಕಾರಾಗೃಹಕ್ಕೆ ಆರೋಪಿ ದರ್ಶನ್ ವರ್ಗಾವಣೆ

ವೈದ್ಯಕೀಯ ಕಾರಣಗಳನ್ನಾಧರಿಸಿ ಅ. 30, 2024 ರಂದು ದರ್ಶನ್ ಅವರಿಗೆ 6 ವಾರಗಳ ಮಧ್ಯಂತರ ಜಾಮೀನು ಲಭಿಸಿತ್ತು.

ಡಿ. 13 ರಂದು ನಟ ಸೇರಿ ಇತರ ಆರೋಪಿಗಳಿಗೆ ಹೈಕೋರ್ಟ್ ಪೂರ್ಣ ಪ್ರಮಾಣದ ಜಾಮೀನು ಮಂಜೂರು ಮಾಡಿತು.

ಈ ತೀರ್ಪನ್ನು ಪ್ರಶ್ನಿಸಿ ರಾಜ್ಯಸರ್ಕಾರ ಸುಪ್ರೀಂಕೋರ್ಟ್‌ಗೆ ಮೊರೆ ಹೋಗಿತ್ತು.

ಇಂದು ಸುಪ್ರೀಂಕೋರ್ಟ್‌ನಿಂದ ತೀರ್ಪು ಹೊರ ಬಿದ್ದಿದ್ದು, ದರ್ಶನ್–ಪವಿತ್ರಾಗೌಡ ಸೇರಿ 7 ಜನರ ಜಾಮೀನು ರದ್ದಾಗಿದೆ.

# ಜಿಲ್ಲಾಧಿಕಾರಿ ನಿತೀಶ್ ಕೆ ಅವರಿಗೆ ಉತ್ತಮ ಕಾರ್ಯ ಸಾಧನೆಗಾಗಿ ರಾಜ್ಯ ಸರ್ಕಾರದಿಂದ ಮತ್ತೊಂದು ಅಭಿನಂದನಾ ಪತ್ರ

ಜುಲೈ–2025ರ ಮಾಹೆಯಲ್ಲಿ ತಮ್ಮ ರಾಯಚೂರು ಜಿಲ್ಲೆಯು ರಾಜ್ಯ ಮಟ್ಟದಲ್ಲಿ ತೃತೀಯ ಸ್ಥಾನ ಪಡೆದಿರುವುದು ಶ್ಲಾಘನೀಯವಾಗಿದೆ.


ನಿಮ್ಮ ರಾಯಚೂರು ಜಿಲ್ಲೆಯಲ್ಲಿನ ಈ ಕಾರ್ಯ ಸಾಧನೆಗೆ ನಿಮ್ಮ ಹಾಗೂ ನಿಮ್ಮ ನಾಡಕಚೇರಿ ಅಥವಾ ಅಟಲ್‌ಜೀ ಜನಸ್ನೇಹಿ ಕೇಂದ್ರದ ಸಿಬ್ಬಂದಿಗಳ ಸಹಕಾರ, ಕಾರ್ಯತತ್ಪರತೆ ಕಾರಣವಾಗಿರುತ್ತದೆ. ಅದ್ದರಿಂದ ಅಟಲ್‌ಜೀ ಜನಸ್ನೇಹಿ ನಿರ್ದೇಶನಾಲಯದ ಪರವಾಗಿ ನಿಮ್ಮ ತಂಡಕ್ಕೆ ನನ್ನ ಅಭಿನಂದನೆಯನ್ನು ವ್ಯಕ್ತಪಡಿಸಲು ಇಚ್ಛಿಸುತ್ತೇನೆ. ಇನ್ನು ಮುಂದಿನ ದಿನಗಳಲ್ಲಿಯು ಸಹ ನಿಮ್ಮಿಂದ ಇದೇ ರೀತಿಯ ಸಹಕಾರ ಹಾಗೂ ಕಾರ್ಯಕ್ಷಮತೆಯನ್ನು ನಿರೀಕ್ಷಿಸುತ್ತೇನೆ ಎಂದು ಕಂದಾಯ ಇಲಾಖೆಯ ಆಯುಕ್ತರಾದ ಪೊಮ್ಮಲ ಸುನೀಲ್‌ಕುಮಾರ್ ಅವರು ರಾಯಚೂರು ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರಿಗೆ ಅಭಿನಂದನೆ ತಿಳಿಸಿದ್ದಾರೆ.

ರಾಯಚೂರ ಜಿಲ್ಲೆಯಲ್ಲಿ ರಾಷ್ಟ್ರೀಯ ಸಾಮಾಜಿಕ ನೆರವು ಯೋಜನೆಯಲ್ಲಿ ಶೇ.100ರಷ್ಟು ಪ್ರಗತಿ ಸಾಧಿಸಿರುವುದಕ್ಕೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರಿಗೆ ರಾಜ್ಯ ಸರಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅವರು ಕಳೆದ ಜುಲೈ ಮಾಹೆಯಲ್ಲಿ ಅಭಿನಂದನಾ ಪತ್ರ ಕಳುಹಿಸಿದ್ದರು.

# ಮಹಾನಗರ ಪಾಲಿಕೆಯ ನಾನಾ ಹುದ್ದೆಗಳ ನೇಮಕಾತಿಗೆ ಕೆಪಿಎಸ್‌ಸಿ ಮಾದರಿಯಲ್ಲಿ ಪರೀಕ್ಷೆ ನಡೆಸಿದ ಆಯುಕ್ತ ಜುಬಿನ್ ಮೊಹಪಾತ್ರ

ಯುವ ಮಾರ್ಗ ಸುದ್ದಿ

**ರಾಯಚೂರು,ಆ.14–**ರಾಯಚೂರು ಮಹಾನಗರ ಪಾಲಿಕೆಯಿಂದ ವಿವಿಧ ಹುದ್ದೆಗಳ ನೇಮಕಾತಿಗಾಗಿ ನಗರದ ಎಲ್.ವಿ.ಡಿ ಕಾಲೇಜಿನಲ್ಲಿ ಆಗಸ್ಟ್ 14ರಂದು ನಡೆದ ಲಿಖಿತ ಹಾಗೂ ಪ್ರಾಯೋಗಿಕ ಪರೀಕ್ಷಾ ಸ್ಥಳಕ್ಕೆ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಭೇಟಿ ನೀಡಿ ಪರಿಶೀಲಿಸಿದರು.



ರಾಯಚೂರು ನಗರಸಭೆಯು ಇತ್ತೀಚೆಗೆ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿದೆ. ಈ ಮಹಾನಗರ ಪಾಲಿಕೆಯು ಉತ್ತಮವಾಗಿ ಬೆಳೆಯಬೇಕು. ಇಲ್ಲಿನ ಆಡಳಿತ ವ್ಯವಸ್ಥೆಯು ಸರಿಯಾಗಿ ನಡೆಯಬೇಕು. ಈ ದಿಶೆಯಲ್ಲಿ ಮಾನವ ಸಂಪನ್ಮೂಲದ ಅವಶ್ಯಕತೆ ಇರುತ್ತದೆ. ಉತ್ತಮವಾದ ಮೆರಿಟ್ ಹೊಂದಿದ ಅರ್ಹ ಅಭ್ಯರ್ಥಿಗಳು ಆಯ್ಕೆಯಾಗಿ ಮಹಾನಗರ ಪಾಲಿಕೆಯ ಕಚೇರಿಯನ್ನು ಪ್ರವೇಶಿಸಿದಲ್ಲಿ ಮಹಾನಗರ ಪಾಲಿಕೆಯ ಆಡಳಿತ ಕೆಲಸವು ಸುಗಮವಾಗಿ ನಡೆಯಲಿದೆ. ಉತ್ತಮ ಅಧಿಕಾರಿ ಸಿಬ್ಬಂದಿ ಇದ್ದಲ್ಲಿ ಮಾತ್ರ ಉತ್ತಮ ಕಾರ್ಯವಾಗಲು ಸಾಧ್ಯವಿದೆ. ಆದ್ದರಿಂದ ಮಹಾನಗರ ಪಾಲಿಕೆಗೆ ಮಾನ್ಯ ಸರ್ಕಾರದಿಂದ ಹೊಸದಾಗಿ ಹುದ್ದೆಗಳನ್ನು ಸೃಜಿಸಲಾಗಿರುತ್ತದೆ. ಈ ಹುದ್ದೆಗಳಲ್ಲಿ ಆಡಳಿತಾತ್ಮಕ ಹಿತದೃಷ್ಟಿಯಿಂದ ರಾಜ್ಯದಲ್ಲಿ ಪ್ರಥಮ ಭಾರಿಗೆ ಮಹಾನಗರ ಪಾಲಿಕೆಯಲ್ಲಿ ಹೊರಗುತ್ತಿಗೆ ಸಂಸ್ಥೆಯ ಮೂಲಕ ನೇಮಕ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿ, ಪ್ರಕಟಣೆ ಹೊರಡಿಸಿ, ಪಾರದರ್ಶಕತೆಯಿಂದ ನಿಯಮಾನುಸಾರ ಪರಿಶೀಲಿಸಿ, ಅರ್ಹ ಅಭ್ಯರ್ಥಿಗಳ ಆಯ್ಕೆಪಟ್ಟಿಯನ್ನು ಮಹಾನಗರ ಪಾಲಿಕೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿತ್ತು. ಅಭ್ಯರ್ಥಿಗಳ ಆಯ್ಕೆಯು ಪಾರದರ್ಶಕತೆಯಿಂದ ಕೂಡಿರಬೇಕು ಎನ್ನುವ ಉದ್ದೇಶದಿಂದಾಗಿ ಕೆಪಿಎಸ್‌ಸಿಯು ನಡೆಸುವ ಪರೀಕ್ಷಾ ಮಾದರಿಯಲ್ಲಿ ಮಹಾನಗರ ಪಾಲಿಕೆಯಿಂದ, ಆಯ್ಕೆ ಪಟ್ಟಿಯಲಿರುವ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯನ್ನು ಹಾಗೂ ಪ್ರಾಯೋಗಿಕ ಪರೀಕ್ಷೆಯನ್ನು ಎಲ್.ವಿ.ಡಿ ಕಾಲೇಜ್ ರಾಯಚೂರನಲ್ಲಿ ಪಾರದರ್ಶಕತೆ ಹಾಗೂ ಶಾಂತಿಯುತವಾಗಿ ನಡೆಸಲಾಗುತ್ತಿದೆ ಎಂದು ಇದೆ ವೇಳೆ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ತಿಳಿಸಿದರು.

# ನಾಗೋಲಿ ಸ.ಹಿ.ಪ್ರಾ.ಶಾಲೆ ನೂತನ ಎಸ್ ಡಿ ಎಂಸಿ ಅಧ್ಯಕ್ಷರಾಗಿ ಸಂಗನಗೌಡ ಆಯ್ಕೆ

ಯುವ ಮಾರ್ಗ ಸುದ್ದಿ

**ಅರಕೇರಾ,ಆ.14–** ತಾಲೂಕಿನ ನಾಗೋಲಿ ಗ್ರಾಮದಲ್ಲಿನ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಎಸ್ ಡಿ ಎಂಸಿ ನೂತನ ಅಧ್ಯಕ್ಷರಾಗಿ ಸಂಗನಗೌಡ ತಂದೆ ಮಲ್ಲನಗೌಡ ಉಪಾಧ್ಯಕ್ಷರಾಗಿ ಶ್ರೀಮತಿ ಭಾಗ್ಯಶ್ರೀ ಗಂಡ ಸಣ್ಣ ಆಂಜನೇಯ್ಯ ಆಯ್ಕೆಯಾದರು. ಎಂದು ಶಾಲೆಯ ಮುಖ್ಯ ಗುರುಗಳಾದ ಪ್ರಭಾಕರ ಪತ್ತಾರ ತಿಳಿಸಿದ್ದಾರೆ.

ಶಾಲೆಯಲ್ಲಿ ಬುಧುವಾರ ಎಸ್ ಡಿ ಎಂಸಿ ರಚನೆ ಸಭೆ ನಡೆಯಿತು. ಎಲ್ಲಾ ಪಾಲಕರು ಸಭೆಯಲ್ಲಿ ಭಾಗವಹಿಸಿ ಸಹಮತದೊಂದಿಗೆ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನ ಆಯ್ಕೆಮಾಡಲಾಯಿತು.

ಸದಸ್ಯರುಗಳಾಗಿ ಲಕ್ಷ್ಮೀ ಗಂಡ ಭೀಮರಾಯ, ಮಾಳಪ್ಪ ತಂದೆ ನಿಂಗಪ್ಪ ಪೂಜಾರಿ, ನಾಗರಾಜ ತಂದೆ ಈರಣ್ಣ, ಪವಿತ್ರ ಗಂಡ ವೆಂಕಟೇಶ,ನಿಂಗಮ್ಮ ಗಂಡ ಬೀರಪ್ಪಪೂಜಾರಿ, ಶಿವುಪ್ರಸಾದ ತಂದೆ ಶಿವರಾಜ, ಲಕ್ಷ್ಮೀ ಗಂಡ ರುದ್ರಪ್ಪ, ಹನುಮಂತಿ ಗಂಡ ಶಶಿಧರ, ಸಾವಿತ್ರಮ್ಮ ಗಂಡ ಮಾನಪ್ಪ ,ಹನುಮಂತಿ ಗಂಡ ಬಸವರಾಜ, ಬಸವರಾಜ ತಂದೆ ಹನುಮಯ್ಯ,ರಮೇಶ ತಂದೆ ಅಂಬ್ರೇಶ,ಮಲ್ಲಿಕಾರ್ಜುನ ತಂದೆ ತಿಮ್ಮಯ್ಯ,ಮೌಲಾಸಾಬ ತಂದೆ ಲಾಲಸಾಬ, ಹನುಮಂತ ತಂದೆ ಕರೆಪ್ಪ, ಮಾಂತಮ್ಮ ಗಂಡ ಭೀಮಯ್ಯ ಆಯ್ಕೆಯಾದರು.

ನೂತನ ಎಸ್ ಡಿ ಎಂ ಸಿ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸರ್ವಸದಸ್ಯ



ರುಗಳನ್ನು ಸನ್ಮಾನಿಸಿ ಗೌರವಿಸಲಾಯಿತು .ಮುಖ್ಯಗುರುಗಳಾದ ಪ್ರಭಾಕರ ಪತ್ತಾರ ಸರಕಾರಿ ಶಾಲೆಗಳ ಬಲವರ್ಧನೆಗೆ ಇಲಾಖೆ ಜತೆಗೆ ಶಿಕ್ಷಕರು ಮತ್ತು ಎಸ್ ಡಿ ಎಂಸಿ ಸದಸ್ಯರ ಪಾತ್ರ ಹಾಗೂ ಶಾಲೆಗಳ ಅಭಿವೃದ್ದಿಯಲ್ಲಿ ಕೂಡಾ ಅವರ ಪಾತ್ರ ಬಹಳಷ್ಟು ಮುಖ್ಯವಾಗಿದೆ ಎಂದರು.

ಶಾಲಾ ಸಮುದಾಯವನ್ನು ಸಮರ್ಪಕವಾಘಿ ಬಳಕೆ ಮಾಡಿಕೊಳ್ಳುವ ಜಾಣ್ಮೆ ಶಾಲೆಯ ಮೇಲುಸ್ತುವಾರಿ ಸಮಿತಿಗೆ ಇರಬೇಕೆಂದು ಬಿ.ಎಸ್. ಕೇಶಾಪೂರ ಸಿ.ಆರ್ ಪಿಯವರು ಹೇಳಿದರು.ಸ್ವಾಗತಿಸಿ ಕೊನೆಯಲ್ಲಿ ಲಿಂಗಯ್ಯ ಹಿರೇಮಠ ಸ.ಶಿ. ವಂದಿಸಿದರು

# ವಿವಿಧ ತಾಲೂಕುಮಟ್ಟದ ದಸರಾ ಕ್ರೀಡಾಕೂಟಕ್ಕೆ ನೋಂದಣಿಗೆ ಅವಕಾಶ

**ರಾಯಚೂರು,ಆ.14–** ಪ್ರತಿ ವರ್ಷದಂತೆ ಈ ವರ್ಷವು ಕೂಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ 2025–26ನೇ ಸಾಲಿನಲ್ಲಿ ಪುರುಷರ ಹಾಗೂ ಮಹಿಳೆಯರಿಗಾಗಿ ವಿವಿಧ ತಾಲ್ಲೂಕುಗಳಲ್ಲಿ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟದ ಆಯ್ಕೆ ಪ್ರಕ್ರಿಯೆಗಳನ್ನು ಹಮ್ಮಿಕೊಳ್ಳಲಾಗಿದ್ದು, ಆಸಕ್ತರು ಕ್ಯೂ ಆರ್ ಕೋಡ್ ಮೂಲಕ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಆಗಸ್ಟ್ 19ರಂದು ಮಾನ್ವಿ ತಾಲೂಕು ಮಟ್ಟದ ಕ್ರೀಡಾಕೂಟವು ಮಾನವಿ ತಾಲ್ಲೂಕು ಹೊರಾಂಗಣ ಕ್ರೀಡಾಂಗಣದಲ್ಲಿ ಆಯೋಜನೆ ಮಾಡಲಾಗಿದ್ದು, ಸಂಘಟಕರಾದ ಮೆಹಬೂಬ್ ಮೊಬೈಲ್ ಸಂಖ್ಯೆ: 9611181539ಗೆ ವರದಿ ಮಾಡಿಕೊಳ್ಳಬಹುದಾಗಿದೆ.ಆಗಸ್ಟ್ 20ರಂದು ದೇವದುರ್ಗ ತಾಲೂಕು ಮಟ್ಟದ ಕ್ರೀಡಾಕೂಟವು ಅರಕೆರಾ ಸರ್ಕಾರಿ ಬಾಲಕರ ಪ್ರೌಢ ಶಾಲೆಯಲ್ಲಿ, ಮಸ್ಕಿ ತಾಲೂಕು ಮಟ್ಟದ ಕ್ರೀಡಾಕೂಟವು ಮಸ್ಕಿ ಕೆ.ಪಿ.ಎಸ್ ಪ್ರೌಢಶಾಲೆಯ ಕ್ರೀಡಾಂಗಣದಲ್ಲಿ ಆಯೋಜನೆ ಮಾಡಲಾಗಿದ್ದು, ಸಂಘಟಕರಾದ ಸಾಬಣ್ಣ ಮೊಬೈಲ್ ಸಂಖ್ಯೆ: 9731493679, ಲಕ್ಷ್ಮಣ 9900859864ಗೆ ವರದಿ ಮಾಡಿಕೊಳ್ಳಬಹುದಾಗಿದೆ.

ಆಗಸ್ಟ್ 21ರಂದು ರಾಯಚೂರು ತಾಲೂಕು ಮಟ್ಟದ ಕ್ರೀಡಾಕೂಟವು ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜನೆ ಮಾಡಲಾಗಿದ್ದು, ಸಂಘಟಕರಾದ ವೆಂಕಟೇಶ್ ಮೊಬೈಲ್ ಸಂಖ್ಯೆ: 8310222353, ಶ್ರೀನಿವಾಸ ಮೊಬೈಲ್ ಸಂಖ್ಯೆ: 9632696453ಗೆ ವರದಿ ಮಾಡಿಕೊಳ್ಳಬಹುದಾಗಿದೆ. ಆಗಸ್ಟ್ 23 ರಂದು ಸಿಂಧನೂರು ತಾಲೂಕು ಮಟ್ಟದ ಕ್ರೀಡಾಕೂಟವು ಸಿಂಧನೂರು ತಾಲ್ಲೂಕು ಹೊರಾಂಗಣ ಕ್ರೀಡಾಂಗಣದಲ್ಲಿ ಆಯೋಜನೆ ಮಾಡಲಾಗಿದ್ದು, ಸಂಘಟಕರಾದ ಸೋಮಲಿಂಗಪ್ಪ ಮೊಬೈಲ್ ಸಂಖ್ಯೆ: 9448418871ಗೆ ವರದಿ ಮಾಡಿಕೊಳ್ಳಬಹುದಾಗಿದೆ.

ಆಗಸ್ಟ್ 24 ರಂದು ಸಿರವಾರ ತಾಲೂಕು ಮಟ್ಟದ ಕ್ರೀಡಾಕೂಟವು ಸಿರವಾರ ಹೋಲಿ ಕ್ರಾಸ್ ಪ್ರೌಢ ಶಾಲೆಯ ಕ್ರೀಡಾಂಗಣದಲ್ಲಿ ಆಯೋಜನೆ ಮಾಡಲಾಗಿದ್ದು, ಸಂಘಟಕರಾದ ಮೆಹಬೂಬ್ ಪಾಷ ಮೊಬೈಲ್ ಸಂಖ್ಯೆ: 9980472040ಗೆ ವರದಿ ಮಾಡಿಕೊಳ್ಳಬಹುದಾಗಿದೆ. ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವು ಆಗಸ್ಟ್ 31ರಿಂದ ಸೆಪ್ಟಂಬರ್ 01ವರೆಗೆ ಮಹಾತ್ಮಗಾಂಧಿ ಜಿಲ್ಲಾ ಹೊರಾಂಗಣ ಕ್ರೀಡಾಂಗಣ ರಾಯಚೂರಿನಲ್ಲಿ ಆಯೋಜನೆ ಮಾಡಲಾಗಿದ್ದು, ಸಂಘಟಕರಾದ ವೆಂಕಟೇಶ್ ಮೊಬೈಲ್ ಸಂಖ್ಯೆ: 8310222353, ಶ್ರೀನಿವಾಸ ಮೊಬೈಲ್ ಸಂಖ್ಯೆ: 9632696453ಗೆ ವರದಿ ಮಾಡಿಕೊಳ್ಳಬಹುದಾಗಿದೆ.

ಷರತ್ತುಗಳು: ಆಯಾ ತಾಲೂಕಿನ ಕ್ರೀಡಾಪಟುಗಳು ಆಯಾ ತಾಲೂಕಿನಲ್ಲಿ ಮಾತ್ರ ಭಾಗವಹಿಸತಕ್ಕದ್ದು. ಕ್ರೀಡಾಪಟುಗಳು ಕ್ರೀಡಾಕೂಟದ ಆನ್‌ಲೈನ್ ಅಥವಾ ಕ್ಯೂ–ಆರ್ ಕೋಡ್ ಮೂಲಕ ನೋಂದಣಿ ಮಾಡಿಕೊಳ್ಳತಕ್ಕದ್ದು.

ತಾಲ್ಲೂಕ ಮಟ್ಟದ ಆಯ್ಕೆಯಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಯಾವುದೇ ರೀತಿಯ ಪ್ರಯಾಣ ಭತ್ಯೆ ಹಾಗೂ ದಿನಭತ್ಯೆ ನೀಡುವುದಿಲ್ಲ. ತಾಲ್ಲೂಕು ಮಟ್ಟದಲ್ಲಿ ವಿಜೇತರಾಗಿ ಜಿಲ್ಲಾ ಮಟ್ಟದಲ್ಲಿ ಭಾಗವಹಿಸುವ ಪುರುಷ ಕ್ರೀಡಾಪಟುಗಳಿಗೆ ಮಾತ್ರ ಪ್ರಯಾಣ ಭತ್ಯೆ ಹಾಗೂ ದಿನಭತ್ಯೆಯನ್ನು ಹಾಗೂ ಮಹಿಳಾ ಕ್ರೀಡಾಪಟುಗಳಿಗೆ ದಿನಭತ್ಯೆಯನ್ನು ಖಜಾನೆ–2ರ ಮೂಲಕ ಕ್ರೀಡಾಪಟುಗಳ ಬ್ಯಾಂಕ್ ಖಾತೆಗೆ ನೇರವಾಗಿ ವರ್ಗಾಯಿಸಲಾಗುವುದು. ಪ್ರತೀ ವಿಜೇತ ಕ್ರೀಡಾಪಟುಗಳು ಆಧಾರ್ ಕಾರ್ಡ್ ವೈಯಕ್ತಿಕ ಹಾಗೂ ಗುಂಪು ತಂಡ ವಿವರ ಹಾಗೂ ತಂಡದ ನಾಯಕರ ಬ್ಯಾಂಕ್ ಪಾಸ್ ಬುಕ್ ಝರಾಕ್ಸ್ ಪ್ರತಿ ಹಾಗೂ ಮೊಬೈಲ್ ನಂಬರ್ ಅನ್ನು ಕಡ್ಡಾಯ ನೋಂದಣಿ ರಜಿಸ್ಟರ್‌ನಲ್ಲಿ ಒದಗಿಸತಕ್ಕದ್ದು, ಸಲ್ಲಿಸದೇ ಇರುವ ಕ್ರೀಡಾಪಟುಗಳು ಪ್ರಯಾಭತ್ಯೆ ಅಥವಾ ದಿನಭತ್ಯೆ ಪಾವತಿ ಮಾಡಲಾಗುವುದಿಲ್ಲ. ಅದಕ್ಕೆ ತಾವೇ ನೇರ ಹೊಣೆಗಾರರು. ಯಾವುದೇ ರೀತಿಯ ನಗದು ಹಣ ನೀಡುವುದಿಲ್ಲ.

ಕ್ರೀಡಾಕೂಟ ನಿಗದಿಪಡಿಸಿದ ದಿನಾಂಕ & ಸಮಯದ ಮುಂಚಿತವಾಗಿ ಆನ್‌ಲೈನ್ ಲಿಂಕ್ https://dasaracmcup-2025.etrpindia.com/KA-sport ನಲ್ಲಿ ಅಥವಾ ಕ್ಯೂ ಆರ್ ಕೋಡ್‌ನಲ್ಲಿ ಆನ್‌ಲೈನ್ ಮೂಲಕವೇ ಕಡ್ಡಾಯ ನೋಂದಣಿ ಆಗಿರತಕ್ಕದ್ದು. ಆಫ್‌ಲೈನ್ ನೋಂದಣಿಗೆ ಅವಕಾಶವಿರುವುದಿಲ್ಲ. ಕ್ರೀಡೆಗಳ ಆರಂಭಗೊಂಡ ನಂತರ ನೋಂದಣಿಗೆ ಅವಕಾಶವಿರುವುದಿಲ್ಲ. ಸರ್ಕಾರದ ಶಕ್ತಿ ಯೋಜನೆ ಜಾರಿಯಲ್ಲಿರುವುದರಿಂದ ಮಹಿಳಾ ಕ್ರೀಡಾಪಟುಗಳಿಗೆ ಪ್ರಯಾಣಭತ್ಯೆಯನ್ನು ಪಾವತಿ ಮಾಡಲಾಗುವುದಿಲ್ಲ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕದಲ್ಲಿ 2.76 ಲಕ್ಷ ಸರ್ಕಾರಿ ಹುದ್ದೆಗಳು ಖಾಲಿ, ಜನರಿಗೆ ಸಿಗುತ್ತಿಲ್ಲ ಸಕಾಲಿಕ ಸೇವೆಗಳು

ಯುವ ಮಾರ್ಗ ಸುದ್ದಿ



**ಮಾನ್ವಿ,ಆ.14–** ಕರ್ನಾಟಕದಾದ್ಯಂತ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಬರೋಬ್ಬರಿ 2.76 ಲಕ್ಷಕ್ಕೂ ಹೆಚ್ಚು ಹುದ್ದೆಗಳು ಖಾಲಿ ಇದ್ದು, ಇದರಿಂದಾಗಿ ಸರ್ಕಾರದ ಯೋಜನೆಗಳು ಮತ್ತು ಸೌಲಭ್ಯಗಳು ಜನಸಾಮಾನ್ಯರಿಗೆ ಸಕಾಲದಲ್ಲಿ ತಲುಪುತ್ತಿಲ್ಲ ಎಂಬ ಆರೋಪಗಳು ಕೇಳಿಬರುತ್ತಿವೆ. ಹಲವು ವರ್ಷಗಳಿಂದ ಈ ಹುದ್ದೆಗಳು ಭರ್ತಿಯಾಗದೆ ಉಳಿದಿದ್ದು, ಸರ್ಕಾರಿ ಸೇವೆಗಳಲ್ಲಿ ವಿಳಂಬ ಮತ್ತು ವೈಫಲ್ಯಗಳಿಗೆ ಇದು ಕಾರಣವಾಗುತ್ತಿದೆ. ಕೂಡಲೇ ಹುದ್ದೆಗಳ ಭರ್ತಿ ಮಾಡುವಂತೆ ಬಹುಜನ ಸಮಾಜ ಪಕ್ಷ ತಹಶೀಲ್ದಾರ್ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದೆ.

ಕರ್ನಾಟಕ ಭಾಗದಲ್ಲಿಯೇ ಸುಮಾರು 47,000 ಹುದ್ದೆಗಳು ಭರ್ತಿಯಾಗದೆ ಉಳಿದಿವೆ. ಇದರಿಂದಾಗಿ ಈ ಭಾಗದ ಜಿಲ್ಲೆಗಳಲ್ಲಿ ಆಡಳಿತಾತ್ಮಕವಾಗಿ ದೊಡ್ಡ ಹಿನ್ನಡೆಯಾಗಿದೆ. ವಿಶೇಷವಾಗಿ, ಶೈಕ್ಷಣಿಕ ಕ್ಷೇತ್ರದಲ್ಲಿ ಶಿಕ್ಷಕರ ಕೊರತೆ ಎದ್ದು ಕಾಣುತ್ತಿದೆ. ಕಲ್ಯಾಣ ಕರ್ನಾಟಕದಲ್ಲಿ ಮಾತ್ರವೇ ಸುಮಾರು 18,000 ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಆದರೂ, ಸರ್ಕಾರ ಈ ಹುದ್ದೆಗಳನ್ನು ಭರ್ತಿ ಮಾಡಲು ಹೆಚ್ಚಿನ ಆಸಕ್ತಿ ತೋರುತ್ತಿಲ್ಲ ಎಂಬ ಮಾತುಗಳು ಕೇಳಿಬರುತ್ತಿವೆ.ಶಾಲಾ ಶಿಕ್ಷಣ ಮತ್ತು ಉನ್ನತ ಶಿಕ್ಷಣ ಇಲಾಖೆಗಳಲ್ಲಿ ಒಟ್ಟು 21,000 ಹುದ್ದೆಗಳು ಖಾಲಿ ಇವೆ. ಈ ಕೊರತೆಯು ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟದ ಮೇಲೆ ನೇರವಾಗಿ ಪರಿಣಾಮ ಬೀರುತ್ತಿದೆ. ಸರ್ಕಾರವು ಈ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಬೇಕೆಂದು ಆಗ್ರಹಿಸಿದರು.

ಸರ್ಕಾರಿ ಇಲಾಖೆಗಳಲ್ಲಿ ಸಿಬ್ಬಂದಿಯ ಕೊರತೆಯಿಂದಾಗಿ ಕಡತಗಳು ಸರಿಯಾದ ಸಮಯಕ್ಕೆ ವಿಲೇವಾರಿಯಾಗದೆ ನೆನೆಗುದಿಗೆ ಬೀಳುತ್ತಿವೆ. ಇದರಿಂದಾಗಿ ನಾಗರಿಕರಿಗೆ ಸಿಗಬೇಕಾದ ಸೌಲಭ್ಯಗಳು ತಡವಾಗುತ್ತಿವೆ. ಸರ್ಕಾರ ಕೂಡಲೇ ಈ ಸಮಸ್ಯೆಗೆ ಸೂಕ್ತ ಪರಿಹಾರ ಕಂಡುಕೊಳ್ಳಬೇಕು ಮತ್ತು ಖಾಲಿ ಇರುವ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ರಾಜ್ಯ ಕಾರ್ಯದರ್ಶಿ ಶ್ಯಾಮಸುಂದರ ಕುಮದಾಳ, ಹನುಮಂತ ಸಾದಾಪುರ, ಅಯ್ಯಪ್ಪ ನಾಯಕ ಸೇರಿದಂತೆ ಇತರರು ಇದ್ದರು.

# ರಾಷ್ಟ್ರಪತಿ ಪದಕಕ್ಕೆ ಆಯ್ಕೆಯಾದ 1090 ಅಧಿಕಾರಿಗಳು

**ನವದೆಹಲಿ, ಆ.14–** ಸ್ವತಂತ್ರ ದಿನಾಚರಣೆಯ ಸಂದರ್ಭದಲ್ಲಿ ಒಂದು ಸಾವಿರಕ್ಕೂ ಹೆಚ್ಚು ಪೊಲೀಸ್ ಅಗ್ನಿಶಾಮಕ ಸೇವೆಗಳು, ಗೃಹರಕ್ಷಕ ದಳ ಮತ್ತು ನಾಗರಿಕ ರಕ್ಷಣೆ ಮತ್ತು ತಿದ್ದುಪಡಿ ಸೇವೆಗಳಿಗೆ ಪದಕಗಳನ್ನು ಪಡೆದವರ ಅಧಿಕೃತ ಪಟ್ಟಿಯನ್ನು ಗೃಹ ಸಚಿವಾಲಯ ಪ್ರಕಟಿಸಿದೆ. ಈ ಗೌರವಗಳಲ್ಲಿ ಶೌರ್ಯ ಪ್ರಶಸ್ತಿಗಳು, ರಾಷ್ಟ್ರಪತಿಗಳ ವಿಶಿಷ್ಟ ಸೇವೆಗಾಗಿ ಪದಕ ಮತ್ತು ಪ್ರತಿಭಾನ್ವಿತ ಸೇವೆಗಾಗಿ ಪದಕ ಸೇರಿವೆ.

ಈ ವರ್ಷ, ಒಟ್ಟು 1,090 ಪದಕಗಳನ್ನು ನೀಡಲಾಗುವುದು, ಇದರಲ್ಲಿ 233 ಶೌರ್ಯ ಪದಕಗಳು, 99 ರಾಷ್ಟ್ರಪತಿಗಳ ವಿಶಿಷ್ಟ ಸೇವೆಗಾಗಿ ಪದಕಗಳು ಮತ್ತು 758 ಪ್ರತಿಭಾನ್ವಿತ ಸೇವೆಗಾಗಿ ಪದಕಗಳು ಸೇರಿವೆ.

ಪೊಲೀಸ್ ವಿಭಾಗದಲ್ಲಿ 226 ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಶೌರ್ಯ ಪದಕಕ್ಕೆ ಆಯ್ಕೆಯಾಗಿದ್ದು, 89 ಜನರಿಗೆ ರಾಷ್ಟ್ರಪತಿಗಳ ವಿಶಿಷ್ಟ ಸೇವೆಗಾಗಿ ಪದಕವನ್ನು ನೀಡಲಾಗುವುದು ಮತ್ತು 635 ಜನರಿಗೆ ಪ್ರತಿಭಾನ್ವಿತ ಸೇವೆಗಾಗಿ ಪದಕವನ್ನು ನೀಡಲಾಗುವುದು.ಜಮ್ಮು ಮತ್ತು ಕಾಶ್ಮೀರದ ಸಿಬ್ಬಂದಿಗೆ ಅತಿ ಹೆಚ್ಚು ಶೌರ್ಯ ಪದಕಗಳು ಬಂದಿವೆ, ನಂತರ ಕೇಂದ್ರ ಮೀಸಲು ಪೊಲೀಸ್ ಪಡೆ ಮತ್ತು ಗಡಿ ಭದ್ರತಾ ಪಡೆ ಸದಸ್ಯರಿದ್ದಾರೆ.

ಅಗ್ನಿಶಾಮಕ ಸೇವೆಗಳಿಗೆ ಸಂಬಂಧಿಸಿದಂತೆ 62 ಪ್ರಶಸ್ತಿಗಳನ್ನು ಘೆಣಟಿಜಜಜಿಟಿಜಜ?ಷಿಸಲಾಗಿದ್ದು, ಇದರಲ್ಲಿ ಆರು ಶೌರ್ಯ ಪದಕಗಳು, ಐದು ರಾಷ್ಟ್ರಪತಿಗಳ ವಿಶಿಷ್ಟ ಸೇವಾ ಪದಕಗಳು ಮತ್ತು 51 ಪ್ರತಿಭಾನ್ವಿತ ಸೇವಾ ಪದಕಗಳು ಸೇರಿವೆ.ಗೃಹರಕ್ಷಕ



ದಳ ಮತ್ತು ನಾಗರಿಕ ರಕ್ಷಣಾ ವಿಭಾಗದಲ್ಲಿ, ಗೌರವಗಳು ಒಂದು ಶೌರ್ಯ ಪದಕ, ಮೂರು ರಾಷ್ಟ್ರಪತಿಗಳ ವಿಶಿಷ್ಟ ಸೇವಾ ಪದಕಗಳು ಮತ್ತು 41 ಪ್ರತಿಭಾನ್ವಿತ ಸೇವಾ ಪದಕಗಳನ್ನು ಒಳಗೊಂಡಿರುತ್ತವೆ.

ತಿದ್ದುಪಡಿ ಸೇವೆಗಳಿಗಾಗಿ, ಇಬ್ಬರು ಅಧಿಕಾರಿಗಳಿಗೆ ರಾಷ್ಟ್ರಪತಿಗಳ ವಿಶಿಷ್ಟ ಸೇವಾ ಪದಕವನ್ನು ನೀಡಲಾಗುತ್ತದೆ, ಆದರೆ 31 ಅಧಿಕಾರಿಗಳಿಗೆ ಪ್ರತಿಭಾನ್ವಿತ ಸೇವಾ ಪದಕವನ್ನು ನೀಡಲಾಗುತ್ತದೆ.ಈ ವಾರ್ಷಿಕ ಮನ್ನಣೆಯು ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳು ಮತ್ತು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳಾದ್ಯಂತ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಶೌರ್ಯ, ಸಮರ್ಪಣೆ ಮತ್ತು ವಿಶಿಷ್ಟ ಸೇವೆಗೆ ಗೌರವವಾಗಿದೆ.ದೇಶದಲ್ಲಿ ಕಾನೂನು, ಸುವ್ಯವಸ್ಥೆ ಮತ್ತು ಸಾರ್ವಜನಿಕ ಸುರಕ್ಷತೆಯನ್ನು ಕಾಪಾಡುವಲ್ಲಿ ಈ ವ್ಯಕ್ತಿಗಳ ಅಸಾಧಾರಣ ಕೊಡುಗೆಯನ್ನು ಗುರುತಿಸಲು ಸ್ವಾತಂತ್ರ್ಯ ದಿನಾಚರಣೆಯ ಭಾಗವಾಗಿ ಪದಕಗಳನ್ನು ನೀಡಲಾಗುತ್ತದೆ.

# ದ್ವೇಷ ಭಾಷಣ ವಿರುದ್ಧ ಕ್ರಮಕ್ಕೆ ಹೊಸ ಕಾನೂನು ಜಾರಿ

**ಬೆಂಗಳೂರು,ಆ.14–**ಇತ್ತೀಚಿನ ವರ್ಷಗಳಲ್ಲಿ ಕೋಮುಭಾವನೆಗೆ ಧಕ್ಕೆ ತರುವ ಹಾಗೂ ಪ್ರಚೋದಿಸುವ ದ್ವೇಷ ಬಾಷಣ ಮಾಡುವವರ ವಿರುದ್ಧ ಹೊಸ ಕಾನೂನು ತರಲಾಗುವುದು ಎಂದು ಗೃಹ ಸಚಿವ ಜಿ.ಪರಮೇಶ್ವರ್ ವಿಧಾನಪರಿಷತ್‌ಗೆ ತಿಳಿಸಿದ್ದಾರೆ.

ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಕಿಶೋರ್ ಕುಮಾರ್ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರುಕರಾವಳಿ ಭಾಗದಲ್ಲಿ ಇತ್ತೀಚಿನ ವರ್ಷಗಳಲ್ಲಿ ಕೋಮು ಸಾಮರಸ್ಯ ಕದಡುವ ಕೆಲಸವಾಗುತ್ತಿದೆ. ಹೀಗಾಗಿ ಕೊಲೆ, ಹಿಂಸಾಚಾರ ನಡೆಯುತ್ತಿವೆ. ಇದನ್ನ ಹತ್ತಿಕ್ಕಲು ವಿಶೇಷ ಕಾರ್ಯ ಪಡೆ ರಚಿಸಲಾಗಿದೆ. ಅನಗತ್ಯವಾಗಿ ಸಾಮಾಜಿಕ ಮಾಧ್ಯಮಗಳ ದ್ವೇಷ ಭಾಷಣ ಹಾಗೂ ಪ್ರಚೋದನಕಾರಿ ಪೋಸ್ಟ್‌ಗಳಿಂದ ಹಿಂಸಾಚಾರಕ್ಕೆ ಕಾರಣವಾಗಿದೆ. ಹೀಗಾಗಿ ಮುಂದಿನ ದಿನಗಳಲ್ಲಿ ದ್ವೇಷ ಭಾಷಣ ಮಾಡುವವರ ವಿರುದ್ಧ ಹೊಸ ಕಾನೂನು ಜಾರಿ ಮಾಡಲಾಗುವುದು ಎಂದರು.

ಕಳೆದ ಜೂನ್ 11 ರಂದು ದಕ್ಷಿಣ ಕನ್ನಡ, ಶಿವಮೊಗ್ಗ ಹಾಗೂ ಉಡುಪಿಗಳಲ್ಲಿ ಕೋಮು ಹಿಂಸಾಚಾರ ನಿಯಂತ್ರಿಸಲು ವಿಶೇಷ ಕಾರ್ಯಪಡೆ ರಚಿಸಲಾಗಿದೆ. ದ್ವೇಷ ಭಾಷಣ, ಕೋಮು ಸಂಬಂಧಿತ ಘಟನೆಗಳ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡುವವರ ಮೇಲೆ ನಿಗಾ ವಹಿಸುತ್ತಿದೆ. ಸಂಭಾವ್ಯ



ಕೋಮು ಹಿಂಸಾಚಾರ ಬಗ್ಗೆ ಕಣ್ಗಾವಲು ಇರಿಸುತ್ತಿದೆ. ವಿಶೇಷ ಕಾರ್ಯಪಡೆ ಸಿಬ್ಬಂದಿಗೆ ಗುಪ್ತಚರ ಹಾಗೂ ತಂತ್ರಜ್ಞಾನ ಬಳಕೆ ತರಬೇತಿ ಕೊಡಲಾಗಿದೆ.

ಬೆಂಗಳೂರು ಹೊರತುಪಡಿಸಿ ಮಂಗಳೂರು ರಾಜ್ಯದ ಜಿಡಿಪಿಯಲ್ಲಿ ಶೇ.6ರಷ್ಟು ಕೊಡುಗೆಯಿದೆ. ಹೀಗಾಗಿ ಕೋಮು ಸಾಮರಸ್ಯ ಹತ್ತಿಕ್ಕಲು ಕಾರ್ಯಪಡೆ ಕಾರ್ಯನಿರ್ವಹಿಸುತ್ತಿದೆ. ಇದುವರೆಗೂ ಹಿಂಸಾಚಾರ ಆಥವಾ ಕೋಮು ಭಾವನೆಗೆ ಧಕ್ಕೆ ತರುವ ರೀತಿ ಯಾವುದೇ ಘಟನೆಗಳು ಸಂಭವಿಸಿಲ್ಲ ಎಂದರು.

# ಹೊಸ ಜಿಲ್ಲಾಸ್ಪತ್ರೆ ನಿರ್ಮಾಣಕ್ಕೆ ಪರಿಶೀಲನೆ

**ಬೆಂಗಳೂರು, ಆ. 14–** ವೈದ್ಯಕೀಯ ಕಾಲೇಜುಗಳ ಸ್ಥಾಪನೆ ಸಂದರ್ಭದಲ್ಲಿ ಜಿಲ್ಲಾಸ್ಪತ್ರೆಗಳನ್ನು ವೈದ್ಯಕೀಯ ಶಿಕ್ಷಣ ಇಲಾಖೆಗೆ ವರ್ಗಾಯಿಸಿರುವ ಜಿಲ್ಲೆಗಳಲ್ಲಿ ಹಂತ ಹಂತವಾಗಿ ಹೊಸದಾಗಿ ಜಿಲ್ಲಾಸ್ಪತ್ರೆಗಳನ್ನು ನಿರ್ಮಾಣ ಮಾಡುವ ಬಗ್ಗೆ ಪರಿಶೀಲನೆ ನಡೆದಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ವಿಧಾನಸಭೆಯಲ್ಲಿಂದು ಹೇಳಿದರು.

ಪ್ರಶ್ನೋತ್ತರ ಅವಧಿಯಲ್ಲಿ ಬಿಜೆಪಿಯ ಚನ್ನಬಸಪ್ಪ ಚನ್ನಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಯನ್ನು ವೈದ್ಯಕೀಯ ಕಾಲೇಜು ಶಿಕ್ಷಣ ಇಲಾಖೆಗೆ ನೀಡಲಾಗಿದೆ. 5 ವರ್ಷಗಳಲ್ಲಿ ಅವರು ಹೊಸ ಆಸ್ಪತ್ರೆ ನಿರ್ಮಾಣ ಮಾಡಿಕೊಂಡು ಜಿಲ್ಲಾಸ್ಪತ್ರೆಯನ್ನು ಆರೋಗ್ಯ ಇಲಾಖೆಗೆ ವಾಪಸ್ ಕೊಡಬೇಕು ಎಂಬ ಒಪ್ಪಂದ ಇದೆ. ಆದರೆ ಇದು ಸಾಧ್ಯವಿಲ್ಲ. ಹಾಗಾಗಿ ಅಗತ್ಯ ಇರುವ ಕಡೆ ಹೊಸದಾಗಿ ಜಿಲ್ಲಾಸ್ಪತ್ರೆಗಳನ್ನು ನಿರ್ಮಾಣ ಮಾಡಬೇಕಾಗುತ್ತದೆ. ಇದಕ್ಕೆ ದೊಡ್ಡಮಟ್ಟದ ಅನುದಾನ ಬೇಕಾಗುತ್ತದೆ ಎಂದರು.

ಈಗಾಗಲೇ ರಾಜ್ಯದ ಬೀದರ್ ಜಿಲ್ಲೆಯಲ್ಲಿ ಬಸವಕಲ್ಯಾಣ ತಾಲ್ಲೂಕು ಆಸ್ಪತ್ರೆಯನ್ನೆ ಜಿಲ್ಲಾಸ್ಪತ್ರೆಯಾಗಿ ಮೇಲ್ದರ್ಜೆಗೇರಿಸಲಾಗಿದೆ. ಅದೇ ರೀತಿ ರಾಯಚೂರಿನ ಸಿಂಧನೂರು, ಚಾಮರಾಜನಗರದ ಕೊಳ್ಳೆಗಾಲದಲ್ಲೂ ತಾಲ್ಲೂಕು ಆಸ್ಪತ್ರೆಗಳನ್ನು ಜಿಲ್ಲಾಸ್ಪತ್ರೆ



ಗಳನ್ನಾಗಿ ಮೇಲ್ದರ್ಜೆಗೇರಿಸುವ ಕೆಲಸ ನಡೆದಿದೆ ಎಂದರು.

ಶಿವಮೊಗ್ಗದಲ್ಲಿ ಹೊಸ ಜಿಲ್ಲಾಸ್ಪತ್ರೆಯನ್ನು ನಿರ್ಮಿಸುವ ಪ್ರಸ್ತಾಪ ಇಲ್ಲ. ಮುಂದಿನ ದಿನಗಳಲ್ಲಿ ಪರಿಶೀಲನೆ ನಡೆಸಿ ಈ ಬಗ್ಗೆ ತೀರ್ಮಾನ ಮಾಡುತ್ತೇವೆ ಎಂದು ಅವರು ಹೇಳಿದರು.

ಇದಕ್ಕೂ ಮೊದಲು ಪ್ರಶ್ನೆ ಕೇಳಿದ್ದ ಚನ್ನಬಸಪ್ಪ ಚನ್ನಿ ಅವರು ಶಿವೊಗ್ಗದ ಮೆಗ್ಗಾನ್ ವೈದ್ಯಕೀಯ ಶಿಕ್ಷಣ ಇಲಾಖೆಗೆ ನೀಡಿರುವುದರಿಂದ ಜಿಲ್ಲಾಸ್ಪತ್ರೆ ಇಲ್ಲದೆ ಜನ ತೊಂದರೆಗೆ ಒಳಗಾಗುತ್ತಿದ್ದಾರೆ. ಹೊಸದಾಗಿ ಜಿಲ್ಲಾಸ್ಪತ್ರೆ ನಿರ್ಮಾಣ ಮಾಡಿ, ಇಲ್ಲದಿದ್ದರೆ ವೈದ್ಯಕೀಯ ಶಿಕ್ಷಣ ಇಲಾಖೆಗೆ ಹೊಸ ಆಸ್ಪತ್ರೆ ನಿರ್ಮಾಣ ಮಾಡಿಕೊಳ್ಳಲು ಹೇಳಿ ಎಂದು ಒತ್ತಾಯಿಸಿದ್ದರು.

# ಗೃಹ ಸಚಿವ ಪರಮೇಶ್ವರ್ ಮನೆಯಲ್ಲಿ ದಲಿತ ನಾಯಕರ ಸಭೆ

**ಬೆಂಗಳೂರು.ಆ. 14–** ಪರಿಶಿಷ್ಟ ಜಾತಿಗಳಲ್ಲಿನ ಒಳ ಮೀಸಲಾತಿಗೆ ಸಂಬಂಧಿಸಿದಂತೆ ನ್ಯಾಯಮೂರ್ತಿ ನಾಗಮೋಹನ್ ದಾಸ್ ಅವರ ನೇತೃತ್ವದ ಆಯೋಗದ ವರದಿ ಅನುಷ್ಠಾನಕ್ಕೆ ಸಂಬಂಧಪಟ್ಟಂತೆ ನಿನ್ನೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರ ಮನೆಯಲ್ಲಿ ವಿಶೇಷ ಸಭೆ ನಡೆದಿದೆ.

ಸಚಿವರಾದ ಹೆಚ್.ಸಿ. ಮಹಾದೇವಪ್ಪ, ಕೆ.ಹೆಚ್.ಮುನಿ ಯಪ್ಪ, ಶಿವರಾಜ ತಂಗಡಗಿ, ವಿಧಾನಸಭೆಯ ಉಪಾಸಭಾಧ್ಯಕ್ಷ ರುದ್ರಪ್ಪ ಲಮಾಣಿ ಮತ್ತಿತರರು ಸಭೆಯಲ್ಲಿ ಉಪಸ್ಥಿತರಿದ್ದರು. ವರದಿಯನ್ನು ಆಧರಿಸಿ ಒಳಮೀಸಲಾತಿ ಜಾರಿಗೆ ಕಾಂಗ್ರೆಸ್ ಸರ್ಕಾರ ಬದ್ಧವಾಗಿದೆ.ಆದರೆ, ಅದಕ್ಕೂ ಮುನ್ನ ಕೆಲವು ಗೊಂದಲಗಳನ್ನು ಬಗೆಹರಿಸಬೇಕು ಎಂಬ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಗಿದೆ.

ಇದೇ 16ರಂದು ನಡೆಯಲಿರುವ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಒಳಮೀಸಲಾತಿಗೆ ಸಂಬಂಧಿಸಿದಂತೆ ತೀರ್ಮಾನ ಕೈಗೊಂಡು ಜಾರಿಗೊಳಿಸಲಾಗುವುದು. ಅದಕ್ಕೂ ಮುನ್ನ ಸಚಿವ ಹಾಗೂ ಶಾಸಕರಲ್ಲಿ ಒಮತದ ಅಗತ್ಯವಿದೆ ಎಂಬ ಅಭಿಪ್ರಾಯ ಕೇಳಿಬಂದಿದೆ.ಕಾಂಗ್ರೆಸ್ ನಲ್ಲಿ ಒಡಕು ಉಂಟಾಗದಂತೆ ನಿರ್ಣಯ ಕೈಗೊಳ್ಳಬೇಕಿದೆ. ವರದಿ ಜಾರಿಗೊಳಿಸಿದ ಕ್ಷಣ ಎಲ್ಲವೂ ಮುಗಿಯುವುದಿಲ್ಲ.ಮುಂದಿನ ದಿನಗಳಲ್ಲಿ ಕೇಂದ್ರ ಸರ್ಕಾರ ನಡೆಸುವ ಜನಗಣತಿಯಲ್ಲಿನ ಜಾತಿ ಸಮೀಕ್ಷೆ ಮಾಹಿತಿ ಆಧರಿಸಿ ಮೀಸಲಾತಿಯನ್ನು ಪರಿಷ್ಕರಣೆ ನಡೆಸುವ ಷರತ್ತಿಗೆ ಒಳಪಟ್ಟು



ಸದ್ಯಕ್ಕೆ ನಿರ್ಧಾರ ತೆಗೆದಕೊಳ್ಳುವುದು ಸೂಕ್ತ ಎಂಬ ಅಭಿಪ್ರಾಯ ಕೇಳಿಬಂದಿದೆ. ಸಭೆಯ ಬಳಿಕೆ ಸುದ್ದಿಗಾರರ ಜತೆ ಮಾತನಾಡಿದ ಸಚಿವ ಹೆಚ್.ಸಿ.ಮಹಾದೇವಪ್ಪ, ನಾವೆಲ್ಲಾ ಒಳಮೀಸಲಾತಿಯ ಪರವಾಗಿದ್ದೇವೆ. ಅಧ್ಯಯನ ನಡೆಸಿ ಸಂಪುಟದಲ್ಲಿ ನಿರ್ಧಾರ ತೆಗೆದುಕೊಳ್ಳಲು ಎಲ್ಲರೂ ಬದ್ಧವಾಗಿದ್ದೇವೆ.

ನಾಗಮೋಹನ್ ದಾಸ್ ಅವರ ವರದಿಯ ಅಂಶಗಳನ್ನು ಚರ್ಚೆ ಮಾಡುತ್ತಿದ್ದೇವೆ. ನಮಲ್ಲಿ ಯಾವುದೇ ಭೀನ್ನಾಭಿಪ್ರಾಯ ಇಲ್ಲ ಎಲ್ಲರೂ ಒಳಮೀಸಲಾತಿಯ ಪರವಾಗಿದ್ದೇವೆ ಎಂದು ಪುನರುಚ್ಚರಿಸಿದರು.

# ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ: ನ್ಯಾ.ರಫೀಕ್ ಅಹ್ಮದ್ ಸಲಹೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.14–**ಜಿಲ್ಲೆಯ ದೇವದುರ್ಗ ಪಟ್ಟಣದ ಬಾಬು ಜಗಜೀವನ್ ರಾಮ್ ಭವನದಲ್ಲಿ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಉಪಯೋಜನೆಯಡಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕತೆ ನಿರ್ಮೂಲನೆ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮ ಆಗಸ್ಟ್ 14ರಂದು ನಡೆಯಿತು.

ಗೌರವಾನ್ವಿತ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಮತ್ತು ದೇವದುರ್ಗ ತಾಲೂಕು ಕಾನೂನು ಸೇವಾ ಸಮಿತಿಯು ಸದಸ್ಯ ಕಾರ್ಯದರ್ಶಿಗಳಾದ ರಫಿಕ್ ಅಹ್ಮದ್ ಅವರು ಸಸಿಗೆ ನೀರೆರೆಯುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಜಗತ್ತಿನಲ್ಲಿ ಶಿಕ್ಷಣವು ಅಭಿವೃದ್ಧಿ ವಿಷಯಕ್ಕಾಗಿ ಅತ್ಯಂತ ಪ್ರಧಾನವಾಗಿದೆ. ಆದ್ದರಿಂದ ಮಕ್ಕಳು ಶಿಕ್ಷಣದಿಂದ ವಂಚಿತರಾಗದ ಹಾಗೆ ಉತ್ತಮ ಶಿಕ್ಷಣ ಕೊಡಬೇಕು. ಶಿಕ್ಷಣದಿಂದ ಮಾತ್ರ ಮಕ್ಕಳು ಬದುಕಿನಲ್ಲಿ ಪ್ರಗತಿ ಹೊಂದಲು ಸಾಧ್ಯವಿದೆ ಎಂದು ಹೇಳಿದರು. ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಎಲ್ಲರೂ ಕೈಜೋಡಿಸಿ ಸಹಕಾರ ನೀಡಬೇಕು ಎಂದು ಅವರು ತಿಳಿಸಿದರು.

ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥ ರೆಡ್ಡಿ ಅವರು ಮಾತನಾಡಿ, 14 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. 14 ವರ್ಷ ಮೇಲ್ಪಟ್ಟು 18 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಅಪಾಯಕಾರಿ ವೃತ್ತಿ ಮತ್ತು ಪ್ರಕ್ರಿಯೆಗಳಲ್ಲಿ ನಿಷೇಧಿಸಲಾಗಿದೆ. ಒಂದು ವೇಳೆ ಅಂತಹ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಂಡಲ್ಲಿ ತಪ್ಪಿತಸ್ಥ ಮಾಲೀಕರ ವಿರುದ್ಧ ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ–1986 ಹಾಗೂ ತಿದ್ದುಪಡಿ ಕಾಯ್ದೆ–2016ರಡಿ ಪ್ರಕರಣ ದಾಖಲಿಸಲಾಗುವುದು. ದುಡಿಯುವ ಮಕ್ಕಳು ಎಲ್ಲಿಯಾದರೂ ಕಂಡುಬಂದಲ್ಲಿ ಸಾರ್ವಜನಿಕರು ಮಕ್ಕಳ ಸಹಾಯವಾಣಿ ಸಂಖ್ಯೆ: 1098/112ಗೆ ಉಚಿತವಾಗಿ ಕರೆ ಮಾಡಿ ಮಾಹಿತಿ ನೀಡಬಹುದು ಎಂದರು.

ಈ ವೇಳೆ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಉಪನ್ಯಾಸರಾಗಿ ವಕೀಲರಾದ ಮರಿಲಿಂಗಪ್ಪ ಕೋಳುರು ಅವರು ಮಾತನಾಡಿ, ಖಾಯಂ ಜನತಾ ನ್ಯಾಯಾಲಯದ ಮಹತ್ವವನ್ನು ತಿಳಿಸಿ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು

ಇದೇ ಸಂದರ್ಭದಲ್ಲಿ ತಾಲೂಕು ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಶುಕುಮುನಿ ರೆಡ್ಡಿ, ಕಾರ್ಮಿಕ ನಿರೀಕ್ಷಕರಾದ ಮಲ್ಲಪ್ಪ, ತಾಲೂಕು ನ್ಯಾಯವಾದಿಗಳ ಸಂಘದ ಉಪಾಧ್ಯಕ್ಷರಾದ ವಸಂತ್ ಕುಮಾರ.ಬಿ ಮತ್ತು ಗಂಗಮ್ಮ ಬೀಮೋಜಿ, ಆರಕ್ಷಕ ನಿರೀಕ್ಷಕರಾದ ಮಂಜುನಾಥ.ಎಸ್, ಅಕ್ಷರ ದಾಸೋಹ ತಾಲೂಕ ಪಂಚಾಯತ್ ಸಹಾಯಕ ನಿರ್ದೇಶಕರಾದ ಬಸವರಾಜ ಕಟ್ಟಿಮನಿ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಇ.ಸಿ.ಓ ರಾಜನಗೌಡ, ಸಮಾಜ ಕಲ್ಯಾಣ ಇಲಾಖೆಯ ಶಿವಕುಮಾರ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಭಾಗಪ್ಪ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕಾರ್ಯಾಲಯದ ಶ್ರೀದೇವಿ, ದೇವದುರ್ಗ ಪಟ್ಟಣದ ಸಿ.ಆರ್.ಪಿ ಮಹಾದೇವ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಜೇರಬಂಡಿ ಮುಖ್ಯಗುರುಗಳಾದ ಬೋರೆಗೌಡ, ಮಕ್ಕಳ ರಕ್ಷಣ ಘಟಕದ ತಿಕ್ಕಯ್ಯ, ಕಾರ್ಮಿಕ ಇಲಾಖೆಯ ಹುಸೇನ್ ನಾಯ್ಕ, ಮಾರ್ಗದರ್ಶಿ ಸಂಸ್ಥೆಯ ರವೀಂದ್ರ, ಡಾನ್ ಬೋಸ್ಕೋ ಸಮಾಜ ಸೇವಾ ಸಂಸ್ಥೆಯ ಬಸವರಾಜ ಮೇತ್ರಿ ಹಾಗೂ ಸ್ಥಳೀಯ ನಿವಾಸಿಗಳು ಮತ್ತು ಇನ್ನಿತರರು ಉಪಸ್ಥಿತರಿದ್ದರು.

# ಹೆಚ್ಚುತ್ತಿರುವ ಕೋಮುಗಲಭೆಗಳ ಕುರಿತು ವಿಧಾನ ಪರಿಷತ್‌ನಲ್ಲಿ ಗಂಭೀರ ಚರ್ಚೆ



ಬೆಂಗಳೂರು,ಆ.14– ರಾಜ್ಯದಲ್ಲಿ ಹೆಚ್ಚುತ್ತಿರುವ ಕೋಮುಗಲಭೆ ಹಾಗೂ ಅದರಿಂದ ಸವಾಜದಲ್ಲಿ ಉಂಟಾಗುತ್ತಿರುವ ದುಷ್ಪರಿಣಾಮಗಳ ಕುರಿತು ವಿಧಾನಪರಿಷತ್‌ನಲ್ಲಿ ಗಂಭೀರವಾದ ಚರ್ಚೆ ನಡೆಯಿತು. ಪ್ರಶ್ನೋತ್ತರ ಅವಧಿಯಲ್ಲಿ ಬಿಜೆಪಿಯ ಕಿಶೋರ್ ಅವರು ಗೃಹಸಚಿವ ಡಾ.ಜಿ.ಪರಮೇಶ್ವರ್ ಅವರಿಗೆ ರಾಜ್ಯದಲ್ಲಿ ಕೋಮುಸೌಹಾರ್ದತೆ ಮೂಡಿಸುವ ವಿಶೇಷ ಕಾರ್ಯಪಡೆ (ಎಸ್‌ಎಫ್) ಕುರಿತು ಪ್ರಶ್ನೆ ಮಾಡಿದರು. ಇದಕ್ಕೆ ಉತ್ತರಿಸಿದ ಗೃಹಸಚಿವರು, ಸರ್ಕಾರ ತೆಗೆದುಕೊಂಡಿರುವ ಕ್ರಮಗಳು, ವಿಶೇಷ ಕಾರ್ಯಪಡೆ, ಕೋಮುಸೌಹಾರ್ದತೆ ಮರುಕಳಿಸಲು ಬೇಕಾದ ವಾತಾವರಣ ಸೃಷ್ಟಿ, ಕಾನೂನು ಸುವ್ಯವಸ್ಥೆ ಇತ್ಯಾದಿ ಕ್ರಮಗಳ ಬಗ್ಗೆ ಸುದೀರ್ಘ ಮಾಹಿತಿ ನೀಡಿದರು. ಈ ಹಂತದಲ್ಲಿ ಆಡಳಿತ ಮತ್ತು ಪ್ರತಿಪಕ್ಷದ ಸದಸ್ಯರು ಗೃಹಸಚಿವರ ಉತ್ತರಕ್ಕೆ ತೃಪ್ತರಾಗದೆ ಸೌಹಾರ್ದ ವಾತಾವರಣ ಹದಗೆಡಿಸುತ್ತಿರುವವರ ಮೇಲೆ ಕಾನೂನು ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು. ಸದಸ್ಯ ಕಿಶೋರ್ ಕುಮಾರ್ ಮಾತನಾಡಿ, ಸರ್ಕಾರ ಅನೇಕ ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಗೃಹಸಚಿವರು ಹೇಳುತ್ತಿದ್ದಾರೆ. ಮಂಗಳೂರಿನಲ್ಲಿ ಕೆಲ ತಿಂಗಳ ಹಿಂದೆ ಸುಹಾಸ್ ಶೆಟ್ಟಿ ಕೊಲೆಯಾಯಿತು. ಆದರೆ ಸಚಿವರು ಕೊಲೆಯಾದವರ ಮನೆಗೆ ಮನೆಗೆ ಹೋಗಲಿಲ್ಲ. ಅವರ ತಂದೆತಾಯಿಗಳನ್ನು, ಸಂಬಂಧಿಕರನ್ನು ಭೇಟಿಯಾಗಿ ಸ್ವಾಂತನವನ್ನು ಹೇಳಿಲ್ಲ. ಆದರೆ ಕೆಲ ದಿನಗಳ ಹಿಂದೆ ಅನ್ಯಕೋಮಿನ ವ್ಯಕ್ತಿಯೊಬ್ಬ ಸತ್ತಿದ್ದಕ್ಕೆ ಅಲ್ಲಿ ಹೋಗಿ ಬಂದಿದ್ದೀರಿ. ನೀವು ಯಾವುದೋ ಜಾತಿ ಅಥವಾ ಧರ್ಮಕ್ಕೆ ಸೀಮಿತರಾದ ಸಚಿವರಲ್ಲ. ಆರು ಕೋಟಿ ಕನ್ನಡಿಗರ ಗೃಹಸಚಿವರು. ಪ್ರತಿಯೊಬ್ಬರ ರಕ್ಷಣೆ ನಿಮ ಕರ್ತವ್ಯ ಎಂದು ಹೇಳಿದರು. ಇದಕ್ಕೆ ಆಕ್ಷೇಪಿಸಿದ ಕಾಂಗ್ರೆಸ್‌ನ ಐವಾನ್ ಡಿಸೋಜ ಕರಾವಳಿಯಲ್ಲಿ ನಡೆಯುತ್ತಿರುವ ಕೋಮುಗಲಭೆಗೆ ಯಾರು ಕಾರಣ ಎಂಬುದು ಎಲ್ಲರಿಗೂ ಗೊತ್ತಿದೆ. ಗೃಹಸಚಿವರು ತಾರತಮ್ಯ ಮಾಡದೆ ಕ್ರಮ ಕೈಗೊಂಡಿದ್ದಾರೆ ಎಂದು ಸಮರ್ಥನೆ ಮಾಡಿಕೊಂಡರು.ಈ ಹಂತದಲ್ಲಿ ಕಾಂಗ್ರೆಸ್‌ನ ಬಿ.ಕೆ.ಹರಿಪ್ರಸಾದ್ ಅವರು ಮಾತನಾಡಿ, ರೌಡಿಶೀಟರ್ ಹಿನ್ನೆಲೆಯುಳ್ಳ ವ್ಯಕ್ತಿ ಸತ್ತರೆ ಅಥವಾ ಅನ್ಯ ಕಾರಣಗಳಿಂದ ಕೊಲೆಯಾದರೆ ಗೃಹಸಚಿವರು ಅಲ್ಲಿಗೆ ಹೋಗಬೇಕೆ? ಎಂದು ಪ್ರಶ್ನೆ ಮಾಡಿದರು. ಕೊಲೆ ಮಾಡುವವರು ಯಾರೋ? ಸಾಯುವವರೋ ಇನ್ಯಾರೋ ? ಇವರಿಗೆ ಕುಮಕ್ಕು ಕೊಡುವ ಸಂಘಟನೆಗಳನ್ನು ಮೊದಲು ನಿಗ್ರಹಿಸಿ. ಯಾವುದೇ ಜಾತಿ, ಧರ್ಮ ನೋಡದೆ ತಪ್ಪಿತಸ್ಥರ ಮೇಲೆ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಜರುಗಿಸಿ ಎಂದು ಒತ್ತಾಯಿಸಿದರು.ಈ ವೇಳೆ ಸಿ.ಟಿ.ರವಿ ಅವರು ಕೆಲವು ಧರ್ಮಗಳಿಗೆ ದೇವರು ಯಾರು? ಸಂಪ್ರದಾಯ ಯಾವುದು? ಎಂಬುದೇ ಗೊತ್ತಿರುವುದಿಲ್ಲ. ಕೇವಲ ತಮ ಧರ್ಮವೇ ಶ್ರೇಷ್ಠ. ಉಳಿದ ಧರ್ಮಗಳು ನಗಣ್ಯ ಎಂಬ ಮಾನಸಿಕ ಸ್ಥಿತಿಯಲ್ಲಿದ್ದಾರೆ. ಇಂಥವರ ಮೇಲೂ ಕ್ರಮ ಕೈಗೊಳ್ಳಿ ಎಂದು ಆಗ್ರಹಿಸಿದರು. ಬಿಜೆಪಿಯ ಭಾರತಿ ಶೆಟ್ಟಿ ಮಾತನಾಡಿ, ಕೋಮುಸೌಹಾರ್ದ ತೆಯನ್ನು ಕೆಲವರು ದುರುದ್ದೇಶಪೂರ್ವಕವಾಗಿ ಹಾಳುಗೆಡುತ್ತಾರೆ. ಇದಕ್ಕಾಗಿಯೇ ಸಂಘಟನೆಗಳಿವೆ. ಮೊದಲು ಇವರನ್ನು ಹತ್ತಿಕ್ಕಿ ಎಂದು ಒತ್ತಾಯಿಸಿದರು. ನಂತರ ಉತ್ತರಿಸಿದ ಪರಮೇಶ್ವರ್, ನಮ ಸರ್ಕಾರ ಬಂದ ಮೇಲೆ ಕೋಮು ತಡೆ ವಿಶೇಷ ಕಾರ್ಯ ಪಡೆ ರಚನೆ ಮಾಡಿದ್ದೇವೆ. ಹಿಂದೆ ಇದ್ದಂಥ ವಾತಾವರಣ ಈಗ ಇಲ್ಲ. ಮಂಗಳೂರು ಸೇರಿದಂತೆ ಇಡೀ ಕರಾವಳಿ ಪ್ರದೇಶ ಸಂಪೂರ್ಣವಾಗಿ ನಿಯಂತ್ರಣಕ್ಕೆ ಬಂದಿದೆ ಎಂದು ಹೇಳುವುದಿಲ್ಲ. ಕೊಲೆ, ಸುಲಿಗೆ, ಅತ್ಯಾಚಾರ ರಾಜ್ಯದಲ್ಲಿ ನಡೆದೇ ಇಲ್ಲ ಎಂದು ಹೇಳಿದರೂ ನಂಬುವುದಿಲ್ಲ. ಕೆಲವು ಕಡೆ ಘಟನೆಗಳು ನಡೆದಿವೆ. ಅದನ್ನು ಪ್ರಾಮಾಣಿಕವಾಗಿ ಒಪ್ಪಿಕೊಳ್ಳುತ್ತೇನೆ. ಹಿಂದಿನ ದಿನಗಳಿಗೆ ಹೋಲಿಸಿದರೆ ಪರಿಸ್ಥಿತಿ ಉತ್ತಮವಾಗಿದೆ. ಬಂಡವಾಳ ಹೂಡಲು ಅನೇಕ ಉದ್ಯಮಿಗಳು ಮುಂದಕ್ಕೆ ಬರುತ್ತಿದ್ದಾರೆ. ಇಡೀ ದೇಶದಲ್ಲೆ ಕರ್ನಾಟಕ ಬಂಡವಾಳ ಹೂಡಿಕೆಯಲ್ಲಿ 2ನೇ ಸ್ಥಾನದಲ್ಲಿದೆ. ರಾಜ್ಯದ ಜಿಡಿಪಿ ಬೆಳವಣಿಗೆಯಲ್ಲಿ ಮಂಗಳೂರು ಶೇ.6ರಷ್ಟು ಕೊಡುಗೆ ನೀಡುತ್ತದೆ. ಇದೆಲ್ಲವೂ ಉತ್ತಮ ವಾತಾವರಣದ ಬೆಳವಣಿಗೆಯಲ್ಲವೇ ಎಂದು ಪ್ರತಿಪಕ್ಷಗಳನ್ನು ಪ್ರಶ್ನೆ ಮಾಡಿದರು.

ಯುವ ಮಾರ್ಗ


## ಅಂಚೆಚೀಟಿ ಸಂಗ್ರಹಣೆ ಉತ್ತೇಜಿಸಲು ಸ್ಕಾಲರ್‌ಶಿಪ್‌ಗೆ ಅರ್ಜಿ ಆಹ್ವಾನ

**ರಾಯಚೂರು,ಆ.14–** ಅಂಚೆ ಇಲಾಖೆಯು ಶಾಲಾ ಮಕ್ಕಳಲ್ಲಿ ಅಂಚೆಚೀಟಿ ಸಂಗ್ರಹಣೆ ಉತ್ತೇಜಿಸಲು ದೀನ್ ದಯಾಳ್ ಸ್ಪರ್ಶ ಯೋಜನೆಯಡಿ ಸ್ಕಾಲರ್‌ಶಿಪ್ ಪ್ರಶಸ್ತಿಗಾಗಿ 6ನೇ ತರಗತಿಯಿಂದ 9ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸ್ಪರ್ಶ ಎಂದರೆ ಹವ್ಯಾಸವಾಗಿ ಸ್ಟ್ಯಾಂಪ್‌ಗಳಲ್ಲಿ ಆಪ್ಟಿಟ್ಯೂಡ್ ಮತ್ತು ಸಂಶೋಧನೆಯ ಪ್ರಚಾರಕ್ಕಾಗಿ ಸ್ಕಾಲರ್‌ಶಿಪ್ ಎಂದರ್ಥ. ಶೈಕ್ಷಣಿಕ ಪಠ್ಯಕ್ರಮವನ್ನು ಬಲಪಡಿಸಲು ಮತ್ತು ಪೂರಕವಾಗಿ ಸಮರ್ಥನೀಯ ರೀತಿಯಲ್ಲಿ ಚಿಕ್ಕ ವಯಸ್ಸಿನಲ್ಲಿ ಮಕ್ಕಳಲ್ಲಿ ಅಂಚೆಚೀಟಿಗಳ ಸಂಗ್ರಹವನ್ನು ಉತ್ತೇಜಿಸುವುದು ವಿದ್ಯಾರ್ಥಿ ವೇತನದ ಉದ್ದೇಶವಾಗಿದೆ.

ಈ ಯೋಜನೆಯಡಿ 2025–26ನೇ ಶೈಕ್ಷಣಿಕ ವರ್ಷದಲ್ಲಿ ಶೇ.60 ಅಂಕಗಳನ್ನು ಹೊಂದಿರುವ ಮತ್ತು ಅಂಚೆಚೀಟಿಗಳ ಸಂಗ್ರಹಣೆಯ ಖಾತೆಯನ್ನು ಫಿಲಾಟೆಲಿಕ್ ಕ್ಲಬ್‌ನ ಸದಸ್ಯರನ್ನು ಹೊಂದಿರುವ ಮತ್ತು ಅಂಚೆಚೀಟಿ ಸಂಗ್ರಹಣೆಯನ್ನು ಹವ್ಯಾಸವಾಗಿ ಮುಂದುವರಿಸುವ 6 ರಿಂದ 9ನೇ ತರಗತಿಯ ವಿದ್ಯಾರ್ಥಿಗಳಿಗೆ ವಾರ್ಷಿಕ 6,000 ರೂ. ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತದೆ. ಅಂಚೆ ಚೀಟಿಗಳ ಸಂಗ್ರಹದ ರಸಪ್ರಶ್ನೆ (ಲಿಖಿತ) ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ.

ಅಂಚೆಚೀಟಿಗಳ ಸಂಗ್ರಹಣೆ, ರಸಪ್ರಶ್ನೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ಅಂಚೆ ಇಲಾಖೆಯು ನೀಡುವ ಅಂಚೆಚೀಟಿಗಳ ಸಂಗ್ರಹ ಯೋಜನೆಯಲ್ಲಿ ಯಶಸ್ವಿಯಾಗಿ ಸ್ಪರ್ಧಿಸಬೇಕಾಗುತ್ತದೆ. ಕರ್ನಾಟಕ ರಾಜ್ಯದಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ಲೆವೆಲ್–1 ಅಂಚೆಚೀಟಿಗಳ ರಸಪ್ರಶ್ನೆ (ಲಿಖಿತ) ನಲ್ಲಿ ಆಸಕ್ತ ವಿದ್ಯಾರ್ಥಿಗಳು ಭಾಗವಹಿಸಲು ಸೆಪ್ಟೆಂಬರ್ 3 ರೊಳಗಾಗಿ ಅರ್ಜಿ ಸಲ್ಲಿಸಲು ತಿಳಿಸಲಾಗಿದೆ. ಜಿಲ್ಲೆಯ ಎಲ್ಲಾ ಶಾಲೆಗಳು ತಮ್ಮ ವಿದ್ಯಾರ್ಥಿಗಳನ್ನು ಸ್ಕಾಲರ್‌ಶಿಪ್ ಯೋಜನೆಯಲ್ಲಿ ಭಾಗವಹಿಸಲು ಪ್ರೋತ್ಸಾಹಿಸಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಧಿಕೃತ ವೆಬ್‌ಸೈಟ್ ವಿಳಾಸ: www.karnatakapost.gov.in ಗೆ ಭೇಟಿ ನೀಡಲು ರಾಯಚೂರು ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

**ರಾಯಚೂರು,ಆ.14–** ಇಲ್ಲಿನ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ವ್ಯಾಪ್ತಿಗೆ ಒಳಪಡುವ ಉಪ ಜಾತಿಗಳವಾರು 2025–26ನೇ ಸಾಲಿನಲ್ಲಿ ಸಾಲ–ಸೌಲಭ್ಯಕ್ಕೆ ಅರ್ಹ ಫಲಾನುವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ನಿಗಮದಿಂದ ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ, ಮೈಕ್ರೋ ಕ್ರೆಡಿಟ್ (ಪ್ರೇರಣಾ)ಯೋಜನೆ, ಭೂ ಒಡೆತನ ಯೋಜನೆ, ಗಂಗಾ ಕಲ್ಯಾಣ ಯೋಜನೆಯಡಿ ಅರ್ಜಿ ಸಲ್ಲಿಸಲು ಇಚ್ಚಿಸುವ ಫಲಾಪೇಕ್ಷಿಗಳು ಸೇವಾ ಸಿಂದು ಅಪ್ಲಿಕೇಷನ್ ಗ್ರಾಮ ಒನ್ ಅಥವಾ ಕರ್ನಾಟಕ ಒನ್ ಅಥವಾ ಬೆಂಗಳೂರು ಒನ್ ಸೆಂಟರ್‌ಗಳಲ್ಲಿ ಮಾತ್ರ ಅರ್ಜಿಯನ್ನು ನಿಗಮಗಳ ವೆಬ್‌ಸೈಟ್ ವಿಳಾಸ: https://sevasindhu.karnataka.gov.in/Sevasindhu/Kannada?ReturnUrl=%2ಈ ನಲ್ಲಿ ಸೆಪ್ಟೆಂಬರ್ 10ರೊಳಗಾಗಿ ಸಲ್ಲಿಸಬಹುದಾಗಿದೆ.

ದಾಖಲಾತಿಗಳು: ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ, ಪಡಿತರ ಚೀಟಿ, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಪುಸ್ತಕ (ಆಧಾರ ಸೀಡ್ ಆಗಿರುವ ಬ್ಯಾಂಕ್ ಖಾತೆ), ವಾಹನ ಪರವಾನಿಗಿ (ವಾಹನವಾಗಿದ್ದಲ್ಲಿ) ದರಪಟ್ಟಿ, ಪಹಾಣಿ ಉದ್ದೇಶ ಕೊಳವೆ ಬಾವಿಯಾಗಿದ್ದಲ್ಲಿ, ಸಣ ಅತೀ ಸಣ್ಣ ರೈತ ಪ್ರಮಾಣ ಪತ್ರ (ಉದ್ದೇಶ ಕೊಳವೆ ಬಾವಿಯಾಗಿದ್ದಲ್ಲಿ) ದೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಸೂಚನೆ: 2023–24 ಮತ್ತು 2024–25 ನೇ ಸಾಲಿನಲ್ಲಿ ಆನ್ಲೈನ್ ಮುಖಾಂತರ ಅರ್ಜಿ ಸಲ್ಲಿಸಿರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ ರಾಯಚೂರು ಜಿಲ್ಲೆ ನವಯುಗ ಕಾಲೇಜು ಹತ್ತಿರ, ಡ್ಯಾಡಿ ಕಾಲೋನಿ ಲಿಂಗಸೂಗೂರು ರೋಡ್ ರಾಯಚೂರು–584101ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪಕಟಣೆಯಲ್ಲಿ ತಿಳಿಸಿದ್ದಾರೆ.

## ಆಗಸ್ಟ್ 16ರಂದು ರಾಯಚೂರ ಜಿಲ್ಲೆಯಲ್ಲಿ ರಾಜ್ಯ ಮಾಹಿತಿ ಆಯುಕ್ತರ ಪ್ರವಾಸ

**ರಾಯಚೂರು,ಆ.14–** ಪೀಠ ಸಂಖ್ಯೆ 04ರ ರಾಜ್ಯ ಮಾಹಿತಿ ಆಯುಕ್ತರಾದ ಶ್ರೀ ರುದ್ರಣ್ಣ ಹರ್ತಿಕೋಟೆ ಅವರು ಆಗಸ್ಟ್ 16ರಿಂದ ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಆಗಸ್ಟ್ 15ರ ರಾತ್ರಿ 8.40ಕ್ಕೆ ಬೆಂಗಳೂರಿನಿಂದ ಉದ್ಯಾನ್ ಎಕ್ಸ್‌ಪ್ರೆಸ್ ರೈಲು ಮೂಲಕ ನಿರ್ಗಮಿಸಿ, ಆಗಸ್ಟ್ 16ರ ಬೆಳಿಗ್ಗೆ 5 ಗಂಟೆಗೆ ರಾಯಚೂರಿಗೆ ಆಗಮಿಸಿ ನಗರದ ಸರ್ಕೀಟ್ ಹೌಸ್‌ನಲ್ಲಿ ವಾಸ್ತವ್ಯ ಮಾಡುವರು.

ಬಳಿಕ ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ನಡೆಯುವ ಪಿಐಓಗಳ ಕಾರ್ಯಾಗಾರದಲ್ಲಿ ಭಾಗಿಯಾಗುವರು. ಮಧ್ಯಾಹ್ನ 2 ಗಂಟೆಗೆ ಪತ್ರಿಕಾಗೋಷ್ಠಿ ನಡೆಸುವರು. ಮಧ್ಯಾಹ್ನ 3 ಗಂಟೆಗೆ ಸಾರ್ವಜನಿಕರ ಭೇಟಿ ನಡೆಸಿ ರಾತ್ರಿ 8 ಗಂಟೆಗೆ ಕಲ್ಬುರ್ಗಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ರಾಜ್ಯ ಮಾಹಿತಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆ.15 ರಂದು ಭಾರತ ಕಮ್ಯೂನಿಸ್ಟ್ ಪಕ್ಷ ತಾಲೂಕು ಸಮಿತಿ ವತಿಯಿಂದ ಕಪ್ಪು ಧ್ವಜರೋಹಣ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಆ.14–**ಪಟ್ಟಣದ ತಾಲೂಕು ಪಂಚಾಯಿತಿ ಕಚೇರಿ ಅವರಣದಲ್ಲಿ ಭಾರತ ಕಮ್ಯೂನಿಸ್ಟ್ ಪಕ್ಷ ತಾಲೂಕು ಸಮಿತಿ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ನಡೆದ ಎರಡನೇ ದಿನದ ಅರ್ನಿಧಿಷ್ಟ ಧರಣಿ ಹಾಗೂ ಪ್ರತಿಭಟನೆ ನಡೆಸಿ ತಾಲೂಕು ಕಾರ್ಯದರ್ಶಿ ಯಲ್ಲಪ್ಪ ಉಟಕನೂರು ಸುದ್ದಿಗಾರರೊಂದಿಗೆ ಮಾತನಾಡಿ ತಾಲೂಕಿನ ತಡಕಲ್ ಗ್ರಾಮದಲ್ಲಿನ ಸ.ನಂ.8ರಲ್ಲಿ ಫಲನುಭಾವಿಗಳಿಗೆ ಮಂಜೂರಾದ ಆಶ್ರಯಮನೆಗಳ ಹಕ್ಕುಪತ್ರಗಳನ್ನು ವಿತರಿಸುವುದಕ್ಕೆ ಕ್ರಮ ಕೈಗೊಳ್ಳಬೇಕು ಹಾಗೂ ಅಲ್ಲಿನ ನಿವಾಸಿಗಳಿಗೆ ರಸ್ತೆ ನಿರ್ಮಾಣ ಮಾಡಿಕೊಡಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಎರಡು ದಿನಗಳಿಂದ ಗ್ರಾಮಸ್ಥರು ಧರಣಿ ನಡೆಸುತ್ತಿದ್ದರು ಕೂಡ ತಾಲೂಕು ಆಡಳಿತ ಸ್ಪಂದಿಸದೆ ಇರುವುದರಿಂದ ಆ.15 ರಂದು ನಡೆಯುವ ಸ್ವಾತಂತ್ರ್ಯ ದಿನಾಚಾರಣೆಯಂದು ಬೆಳಿಗ್ಗೆ 8ಕ್ಕೆ ತ್ರಿವರ್ಣ ಧ್ವಜಕ್ಕೆ ಬದಲಿಯಾಗಿ ಕಪ್ಪು ಧ್ವಜವನ್ನು ಧ್ವಜಾರೋಹಣ ಮಾಡುವ ಮೂಲಕ ತೀವ್ರ



ಪ್ರತಿಭಟನೆ ನಡೆಸಲಾಗುವುದು ಹಾಗೂ ಅಮರಣಾಂತ ಉಪವಾಸ ಸತ್ಯಾಗ್ರಹವನ್ನು ಆರಂಭಿಸಲಾಗುವುದು ಎಂದು ತಿಳಿಸಿದರು.

ಪ್ರಕಾಶ ತಡಕಲ್,ಪ್ರಕಾಶ ದೋತ್ರಬಂಡಿ, ಸಣ್ಣ ಹುಲುಗಪ್ಪ, ಶಿವರಾಜಯಾದವ್, ನಾಗರಾಜ ನಾಯಕ, ರಮೇಶಯಾದವ್, ದೊಡ್ಡ ಹುಸೇನಿ,ತಿಪ್ಪಣ್ಣ ಭಜಂತ್ರಿ, ಅಂಬಮ್ಮ ನಾಯಕ,ಹನುಮಂತ ,ಬಸಪ್ಪ ಸೇರಿದಂತೆ ಇನ್ನಿತರರು ಇದ್ದರು.

# ವಿದ್ಯಾರ್ಥಿಗಳು ಉನ್ನತ ಗುರಿ, ಕನಸು ಹೊಂದಿರಿ: ನಾಗೋಲಿ

**ಯುವ ಮಾರ್ಗ ಸುದ್ದಿ**




**ದೇವದುರ್ಗ,ಆ.14–**'ಯುವ ಜನತೆ ತಮ್ಮ ಬದುಕಿನಲ್ಲಿ ಯಶಸ್ವಿ ಯಾಗಬೇಕಾದರೆ ವಿದ್ಯಾರ್ಥಿ ದೆಸೆಯಲ್ಲೇ ಉನ್ನತವಾದ ಗುರಿ ಮತ್ತು ಉತ್ತಮವಾದ ಕನಸುಗಳನ್ನು ಹೊಂದಿರಬೇಕು. ಎಂದು ಮುನಿಯಪ್ಪ ನಾಗೋಲಿ ಹೇಳಿದರು.

ಅವರು ತಾಲೂಕಿನ ಮಸರ 'ಕಲ್ ಗ್ರಾಮದ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಬುಧವಾರದಂದು ಆಯೋಜಿಸಿದ್ದ ಪ್ರಥಮ ಪಿ ಯು ಸಿ ವಿದ್ಯಾರ್ಥಿಗಳಿಗೆ ಸ್ವಾಗತ ಹಾಗೂ ದ್ವಿತೀಯ ಪಿ ಯು ಸಿ ಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮವನ್ನು ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿ ವಿದ್ಯಾರ್ಥಿಗಳು ತಮ್ಮ ಶಿಕ್ಷಣ ಸಮಾಜಕ್ಕೆ ಪೂರಕವಾಗುವಂತೆ ವಿದ್ಯಾರ್ಜನೆ ಮಾಡಬೇಕು ಜೊತೆಗೆ ಶಿಕ್ಷಣವೂ ಜೀವನದಲ್ಲಿ ಸ್ವತಂತ್ರರಾಗಿ ಸಾಗುವಂತೆ ಮಾಡುತ್ತದೆ,ಕಾಲೇಜು ಸಂಧರ್ಭದಲ್ಲಿ ಉತ್ತಮ ಸ್ನೇಹ ಗಳಿಸಿಕೊಂಡು ಶೈಕ್ಷಣಿಕ ಪ್ರಗತಿ ಸಾಧಿಸಿದರೆ ಉತ್ತಮ ಜೀವನ ರೂಪಿಸಿಕೊಳ್ಳಲು ಸಾಧ್ಯ,ವಿದ್ಯಾರ್ಥಿಗಳು ಶಿಕ್ಷಣ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡಿ ನಿಮ್ಮ ತಂದೆ–ತಾಯಿ ಮತ್ತು ಕಾಲೇಜಿನ ಕೀರ್ತಿ ಹೆಚ್ಚಿಸಬೇಕು, ಗುರು ಹಿರಿಯರನ್ನು ಗೌರವದಿಂದ ಕಾಣುವುದು ಜೊತೆಗೆ ಗುಣಮಟ್ಟದ ಶಿಕ್ಷಣ ಕಲಿತು ದೇಶದ ಒಬ್ಬ ಒಳ್ಳೆಯ ಪ್ರಜೆಯಾಗಿ ಬಾಳಬೇಕು, ನಮ್ಮ ಭಾಗ ಹಿಂದುಳಿದ ಅಣೆಪಟ್ಟಿಗೆ ಹೊಂದಿದ್ದು ಆದರೆ ನಮ್ಮ ಭಾಗ ಸಾಹಿತ್ಯ ಕ್ಷೇತ್ರದ, ದಾಸ ಸಾಹಿತ್ಯ, ವಚನ ಸಾಹಿತ್ಯ ಮತ್ತು ರಗಳೆಗಳಂತ ಸಾಹಿತ್ಯದ ಮೂಲಕ ನಮ್ಮ ಭಾಗ ಮುಂದು ವರೆದಿದೆ, ನಮ್ಮ ಕಷ್ಟ ವನ್ನು, ನಮ್ಮ ಬದುಕನ್ನು ನಾವೇ ರೂಪಿಸಬೇಕು, ನಮ್ಮಲ್ಲಿ ಇನ್ನು ಇಚ್ಛಾ ಶಕ್ತಿ ಕೊರತೆ ಇದೆ, ನಮ್ಮ ಭಾಗಕ್ಕೆ ನೀರಾವರಿ ಬಂದರು ಪ್ರಯೋಜನವಿಲ್ಲ ನಮಗೆ ಗೂಳೆ ಹೋಗೋದು ಪರಿಸ್ಥಿತಿ ತಪ್ಪಿಲ್ಲ, ಮಕ್ಕಳಲ್ಲಿ ಸಂಸ್ಕಾರ ಇದ್ದಾಗ ಮಾತ್ರ ಜೀವನ ರೂಪಿಸಿಕೊಳ್ಳಲು ಸಾಧ್ಯ,ನಿಮ್ಮ ಜೀವನದಲ್ಲಿ ಉತ್ತಮ ಮೌಲ್ಯಗಳನ್ನು ರೂಪಿಸಿಕೊಂಡಾಗ ಮಾತ್ರ ಯಶಸ್ಸು ಕಂಡುಕೊಳ್ಳಲು ಸಾಧ್ಯ ಎಂದು ಹೇಳಿದರು. ನಂತರ ಕಾರ್ಯಕ್ರಮವನ್ನುದ್ದೇಶಿಸಿ ಕನ್ನಡ ಉಪನ್ಯಾಸಕ ಜಲಿಲ್ ಅಹ್ಮದ್,ಚಿತ್ರಕಲಾ ಶಿಕ್ಷಕ ಶಾಂತಪ್ಪ, ಬಸವರಾಜ ದೇವದುರ್ಗ, ಹಾಗೂ ಕಾಲೇಜಿನ ಪ್ರಭಾರಿ ಪ್ರಾಂಶುಪಾಲ ಯಮುನಪ್ಪ ಕಕ್ಕೇರಾ ಮಾತನಾಡಿದರು.

# ಬಿ.ವಿ.ಆರ್ ಇ–ಟೆಕ್ನೋ ಶಾಲೆಯಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಆಚರಣೆ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಆ.14–** ಪಟ್ಟಣದ ಬಿ.ವಿ.ಆರ್ ಇ–ಟೆಕ್ನೋ ಶಾಲೆಯ ಆವರಣದಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಪೂರ್ವ ಭಾವಿಯಾಗಿ ಆಚರಿಸಲಾದ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮವನ್ನು ಶ್ರೀಕೃಷ್ಣನ ಮೂರ್ತಿಗೆ ಪೂಜೆ ಸಲ್ಲಿಸುವ ಮೂಲಕ ಬಿ.ವಿ.ಆರ್.ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಬಿ.ವಿ.ರೆಡ್ಡಿ ಚಾಲನೆ ನೀಡಿ ಮಾತನಾಡಿ ನಮ್ಮ ದೇಶದಲ್ಲಿ ಶ್ರೀ ಕೃಷ್ಣನ ಜನ್ಮದಿನವನ್ನು ವಿಶೇಷವಾಗಿ ಆಚರಿಸಲಾಗುವುದು ಹಾಗೂ ಗೋಕುಲಾಷ್ಟಮಿ ಎಂದು ಕೂಡ ಆಚರಿಸಲಾಗುತ್ತದೆ ಇಂದು ಶ್ರೀ ಕೃಷ್ಣನ ಬಾಲ ವೃತ್ತಂತವನ್ನು ಮಕ್ಕಳು ಹೆಚ್ಚಾಗಿ ಇಷ್ಟ ಪಡುತ್ತಾರೆ ಬಾಲಕೃಷ್ಣನೆಂದರೆ ಎಲ್ಲಾರಿಗೂ ಅಚ್ಚುಮೆಚ್ಚು ಅದ್ದರಿಂದ ನಮ್ಮ ಶಾಲೆಯ ಮಕ್ಕಳಿಗೆ ಬಾಲ ಕೃಷ್ಣನ ಕುರಿತು ತಿಳಿಸುವ ಉದ್ದೇಶದಿಂದ ವಿವಿಧ ರೂಪಕಗಳನ್ನು ಶಾಲೆಯ ವಿದ್ಯಾರ್ಥಿಗಳ ಮೂಲಕ ಪ್ರದರ್ಶನ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಶ್ರೀಕೃಷ್ಣನ ವೇಷವನ್ನು ಹಾಕಿದ ಮಕ್ಕಳು ಮೊಸರು ಗಡಿಗೆಯನ್ನು ಒಡೆಯುವ ಮೂಲಕ ಕೃಷ್ಣ ಜಯಂತಿಯ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಚಾಲನೆ ನೀಡಿದರು.ಶಾಲೆಯ ವಿದ್ಯಾರ್ಥಿಗಳು ಶ್ರೀ ಕೃಷ್ಣನ ಛದ್ಮವೇಷವನ್ನು ಹಾಕಿಕೊಂಡು ಸಂಭ್ರಮಿಸಿದರು. ನೃತ್ಯ,ಹಾಡುಗಳ ಮೂಲಕ ಶ್ರೀ ಕೃಷ್ಣನ ಜೀವನ ಚರಿತ್ರೆಯನ್ನು ತಿಳಿಸಿದರು.

ಶಾಲೆಯ ಶಿಕ್ಷಕರಾದ ವಿಜಯಲಕ್ಷ್ಮೀ ,ಜ್ಯೋತಿ,ವಾಜೇಂದ್ರ ದಿಗ್ಗಾವಿ , ಉಡುಪಿಕೃಷ್ಣ ,ಸುಷ್ಮಾ ರೆಡ್ಡಿ ,ಸುಧಾ, ನಫೀಜಾ, ಶೋಭಾ, ಪೂಜಾ , ಲಕ್ಷ್ಮೀ ಮಕ್ಕಳಿಗೆ ಶ್ರೀಕೃಷ್ಣನ ವೇಷವನ್ನು ಹಾಕಿಸಿ ನೃತ್ಯ ಸಂಯೋಜನೆ ಮಾಡಿದರು. ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳಾದ ಬಿ.ಪದ್ಮಾವತಿ, ಉಪಾಧ್ಯಕ್ಷ ಪ್ರವೀಣ ಕುಮಾರ ರೆಡ್ಡಿ, ಖಜಾಂಚಿ ಭಾಸ್ಕರ ರೆಡ್ಡಿ, ಶಾಲಾ ಮುಖ್ಯೋಪಾಧ್ಯಾಯರಾದ ಸರ್‌ಮತ್ ಖಾನ್ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಪಾಲಕರು ಭಾಗವಹಿಸಿದರು.

## ಕ್ಯಾನ್ಸರ್‌ಕಾರಕ ಕ್ಯಾಟ್‌ಫಿಶ್ ಮೀನು ಸಾಕಾಣಿಕೆ ದಂಧೆ ತಡೆಯಿರಿ

**ಕಲಬುರಗಿ,ಆ.14–** ಸಾರ್ವಜನಿಕರ ಅನಾರೋಗ್ಯ ಹಾಗೂ ಕ್ಯಾನ್ಸರಕ್ಕೆ ಕಾರಣವಾಗಿರುವ ಆಫ್ರಿಕನ್ ಕಟ್ಫಿಶ್ ಸಾಕಾಣಿಕೆಯನ್ನು ಕಟ್ಟುನಿಟ್ಟಾಗಿ ನಿಯಂತ್ರಿಸಬೇಕು. ಈಗಾಗಲೇ 2012ರಲ್ಲಿ ಹೈಕೋರ್ಟ್ ಕ್ಯಾಟ್‌ಫಿಶ್ ಸಾಕಾಣಿಕೆ ನಿಷೇಧಿಸಿದರೂ ಅಕ್ರಮವಾಗಿ ಈಗ ದಂಧೆ ನಡೆಸಲಾಗುತ್ತಿದೆ. ಕೂಡಲೇ ತಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ವಿಧಾನಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್. ಮುನಿಯಪ್ಪ ರಿಗೆ ಆಗ್ರಹಿಸಿದರು.

ವಿಧಾನಪರಿಷಣಜಿನಲ್ಲಿ ಬುಧವಾರ ಕಾಂಗ್ರೆಸ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ ಶೂನ್ಯವೇಳೆಯಲ್ಲಿ ಈ ವಿಷಯ ಪ್ರಸ್ತಾಪಿಸಿ, ಮುಸುಕಿನ ಜೋಳ ಮತ್ತಿತರರ ತೋಟದ ಜಮೀನುಗಳ ಮಧ್ಯೆ ಕೃಷಿ ಬೆಳೆಯ ಜೊತೆಯಲ್ಲಿ ಹೊಂಡ ನಿರ್ಮಿಸಿಕೊಂಡು ಯಾರ ಅರಿವಿಗೂ ಬಾರದಂತೆ ಅಕ್ರಮವಾಗಿ ಕ್ಯಾಟ್‌ಫಿಸ್ ಸಾಕಾಣಿಕೆ ದಂಧೆ ನಡೆಸಲಾಗುತ್ತಿದೆ. ಬೆಂಗಳೂರು, ಹೊಸಕೋಟೆ ಸೇರಿ ರಾಜ್ಯದ ವಿವಿಧ ನಗರ ಪ್ರದೇಶದಿಂದ ರವಾನೆಯಾಗುವ ಕಸಾಯಿಖಾನೆ ಮಾಂಸದ ತ್ಯಾಜ್ಯ, ನಿರ್ಜಿವ ಪ್ರಾಣಿಗಳು, ರೇಷ್ಮೆ ಹುಳುವನ್ನು ಮೀನುಗಳಿಗೆ ಆಹಾರ ನೀಡಲಾಗುತ್ತಿದೆ. ಇದರಿಂದ ಸುತ್ತಲಿನ ಪ್ರದೇಶದಲ್ಲಿ ದುರ್ವಾಸನೆ ಬೀರಿದಲ್ಲದೆ, ಸಾಂಕ್ರಾಮಿಕ ರೋಗಗಳಿಗೆ ಆಹ್ವಾನ ನೀಡಿದಂತಾಗಿದೆ. ನಿಷೇಧಿತ ಆಫ್ರಿಕನ್ ಮೀನನ್ನು ಲೋಡಗಟ್ಟಲೇ ಬೆಂಗಳೂರು, ಆಂಧ್ರ, ಕಲ್ಕತ್ತಾ, ಮುಂಬೈ, ದೆಹಲಿ, ಪಂಜಾಬ್ ಸೇರಿ ದೊಡ್ಡ ದೊಡ್ಡ ನಗರಗಳಿಗೆ ಟ್ರಗಳಲ್ಲಿ ರವಾನೆಯಾಗುತ್ತಿದೆ. ದಂಧೆಕೋರರಿಗೆ ಪ್ರತಿ ಲೋಡ್‌ನಿಂದ ಲಕ್ಷಾಂತರ ಲಾಭ ದೊರೆಯುತ್ತಿದೆ. ಆದರೆ ಸಂಬಂಧಿಸಿದ ಅಧಿಕಾರಿಗಳು ಕಾಟಾಚಾರಕ್ಕೆ ದಾಳಿ ನಡೆಸದೆ ಕಟ್ಟುನಿಟ್ಟಿನ ಕ್ರಮ ಕೈಗೊಂಡು ಸಾರ್ವಜನಿಕರ ಆರೋಗ್ಯದ ಮೇಲಾಗುವ ದುಷ್ಪರಿಣಾಮ ತಡೆಗಟ್ಟಬೇಕು ಎಂದು ಮನವಿ ಮಾಡಿದರು.

## ವಿವಿಧ ಯೋಜನೆಗಳಡಿ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ರಾಯಚೂರು ,ಆ.14–** ಇಲ್ಲಿನ ಡಾ.ಬಿ.ಆರ್.ಅಂಬೇಡ್ಕರ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ ವ್ಯಾಪ್ತಿಗೆ ಒಳಪಡುವ ಉಪ ಜಾತಿಗಳವಾರು 2025–26ನೇ ಸಾಲಿನಲ್ಲಿ ಸಾಲ ಸೌಲಭ್ಯಕ್ಕಾಗಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಇಚ್ಚಿಸುವ ಫಲಾಪೇಕ್ಷಿಗಳು ಸೇವಾ ಸಿಂದು ಅಪ್ಲಿಕೇಷನ್ ಗ್ರಾಮ ಒನ್ ಅಥವಾ ಕರ್ನಾಟಕ ಒನ್ ಅಥವಾ ಬೆಂಗಳೂರು ಒನ್ ಸೆಂಟರ್‌ಗಳಲ್ಲಿ ವೆಬ್‌ಸೈಟ್ ವಿಳಾಸ https://sevasindhu.karnataka.gov.in/Sevasindhu/Kannada?ReturnUrl=%2ಈ ಮೂಲಕ ಸೆಪ್ಟಂಬರ್ 10 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ನಿಗಮದ ನಿರ್ದೇಶಕ ಮಂಡಳಿ ವಿಮೋಚನಾ ಕೋಟಾ ಅಥವಾ ಸರ್ಕಾರದ ಸಾಂಸ್ಥಿಕ ಕೋಟಾದಡಿ ಸ್ವೀಕರಿಸುವ ಅರ್ಜಿಗಳನ್ನು ಸಹ ಸೇವಾ ಸಿಂಧು ಪೋರ್ಟಲ್ ಮೂಲಕವೇ ಸಲ್ಲಿಸಬೇಕು.

ಹೆಚ್ಚಿನ ಮಾಹತಿಗಾಗಿ ಡಾ:ಬಿ.ಆರ್.ಅಂಬೇಡ್ಕರ ಅಭಿವೃದ್ಧಿ ನಿಗಮ ರಾಯಚೂರು ಜಿಲ್ಲೆ, ಚೈತನ್ಯ ಆಸ್ಪತ್ರೆ ಹತ್ತಿರ, ಡ್ಯಾಡಿ ಕಾಲೋನಿ ಲಿಂಗಸೂಗೂರು ರೋಡ್ ರಾಯಚೂರು–584101, ದೂರವಾಣಿ ಸಂಖ್ಯೆ: 08532–220774 ಇವರಿಗೆ ಸಂಪರ್ಕಿಸಬಹುದಾಗಿದೆ. 2023–24 ಮತ್ತು 2024–25 ನೇ ಸಾಲಿನಲ್ಲಿ ಅನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಿರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಯೋಜನೆಗಳ ವಿವರ: ಸ್ವಯಂ ಉದ್ಯೋಗ ನೇರಸಾಲ ಯೋಜನೆಗಳ ಪೈಕಿ ನೇರಸಾಲ ಯೋಜನೆಯಡಿ ಕಿರು ಆರ್ಥಿಕ ಚಟುವಟಿಕೆಗಳನ್ನು ಪ್ರಾರಂಭಿಸಲು ನಿಗಮದಿಂದ ಸಹಾಯಧನ ಮತ್ತು ನೇರಸಾಲ ಮಂಜೂರಿ ಮಾಡಲಾಗುತ್ತದೆ. ಅದೇ ರೀತಿ ಕುರಿ ಸಾಕಣೆ ಯೋಜನೆಯಡಿ ಕುರಿ ಸಾಕಣೆ ಉದ್ದೇಶಕ್ಕೆ ನಿಗಮದಿಂದ ಸಹಾಯಧನ ಮತ್ತು ನೇರಸಾಲ ಮಂಜೂರು ಮಾಡಲಾಗುತ್ತದೆ. ಈ ಯೋಜನೆಯಡಿ ಘಟಕ ವೆಚ್ಚ 1 ಲಕ್ಷ ರೂ ಇದ್ದು, ಇದರಲ್ಲಿ ಸಹಾಯಧನ 50,000 ರೂ. ಮತ್ತು ಸಾಲ 50,000 ರೂ.ಇರುತ್ತದೆ. ಶೇ.4ರಷ್ಟು ಬಡ್ಡಿದರ ನಿಗದಿಪಡಿಸಲಾಗಿದೆ.

ಅದೇ ರೀತಿ ಬ್ಯಾಂಕ್ ಸಹಯೋಗದೊಂದಿಗೆ ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆಯನ್ನು ರೂಪಿಸಲಾಗಿದ್ದು ಇದರಡಿ ಸ್ವಾವಲಂಬಿ ಸಾರಥಿ ಕಾರ್ಯಕ್ರಮದಡಿ ವಾಹನ ಸೌಕರ್ಯ ಒದಗಿಸಲಾಗುತ್ತದೆ. ಸರಕು ವಾಹನ ಟ್ಯಾಕ್ಸಿ (ಹಳದಿ ಬೋರ್ಡ್) ಉದ್ದೇಶದಡಿ ಘಟಕ ವೆಚ್ಚ ಶೇ.75ರಷ್ಟು ಅಥವಾ ಗರಿಷ್ಟ ರೂ.4 ಲಕ್ಷ ರೂ.ಗಳ ಸಹಾಯಧನ ನೀಡಲಾಗುತ್ತದೆ.

ಅದೇ ರೀತಿ ಫಾಸ್ಟ್ ಫುಡ್ ಟ್ರಕ್ ಟ್ರೇಲರ್ ಅಥವಾ ಮೊಬೈಲ್ ಕಿಚನ್ ಫುಡ್ ಕಿಯೋಸ್ಥ್ ಕಾರ್ಯಕ್ರಮದಡಿ ಫುಡ್ ಕಾರ್ಟ್ ವಾಹನಗಳ ಉದ್ದೇಶದಡಿ ಘಟಕ ವೆಚ್ಚದ ಶೇ.75 ರಷ್ಟು ಅಥವಾ ಗರಿಷ್ಟ 4 ಲಕ್ಷ ರೂ.ಗಳ ಸಹಾಯಧನ ನೀಡಲಾಗುತ್ತದೆ.

ಅದೇ ರೀತಿ ಹೈನುಗಾರಿಕೆ ಕಾರ್ಯಕ್ರಮದಡಿಯಲ್ಲಿ ಹೈನುಗಾರಿಕೆ ಕೈಗೊಳ್ಳಲು ಎರಡು ಎಮ್ಮೆ ಅಥವಾ ಎರಡು ಹಸುಗಳಿಗೆ ಘಟಕ ವೆಚ್ಚದ ಶೇ.50ರಷ್ಟು 1.25 ಲಕ್ಷ ರೂ.ಗಳ ಸಹಾಯಧನ ನೀಡಲಾಗುತ್ತದೆ. ಜೊತೆಗೆ ಇತರೆ ಉದ್ದೇಶ ಕಾರ್ಯಕ್ರಮಡಿ ವ್ಯಾಪಾರ ಮತ್ತು ಇತರೆ ಉದ್ದೇಶಗಳಿಗೆ ಘಟಕ ವೆಚ್ಚ ಶೇ.70 ರಷ್ಟು ಅಥವಾ ಗರಿಷ್ಟ ರೂ.2 ಲಕ್ಷ ರೂ.ಸಹಾಯಧನ ನೀಡಲಾಗುತ್ತದೆ. ಜೊತೆಗೆ ಮೈಕ್ರೋ ಕ್ರೆಡಿಟ್ (ಪ್ರೇರಣಾ ) ಯೋಜನೆ, ಭೂ ಒಡೆತನ ಯೋಜನೆ ಮತ್ತು ಗಂಗಾ ಕಲ್ಯಾಣ ಯೋಜನೆಗೆ ಸಹ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಡಾ.ಬಿ.ಆರ್.ಅಂಬೇಡ್ಕರ ಅಭಿವೃದ್ದಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಯಚೂರು ಅಂಚೆ ಕಚೇರಿಯಿಂದ ಹರ್ ಘರ್ ತಿರಂಗಾ ಪ್ರಭಾತ ಪೇರಿ




**ರಾಯಚೂರು,ಆ.14–** ರಾಯಚೂರು ನಗರದ ಮುಖ್ಯ ಅಂಚೆ ಕಚೇರಿಯಿಂದ ಆಗಸ್ಟ್ 14ರಂದು ಹರ್ ಘರ್ ತಿರಂಗಾ ಪ್ರಭಾತ್ ಪೇರಿ ನಡೆಸಲಾಯಿತು.

ಕಾರ್ಯಕ್ರಮಕ್ಕೆ ಅಂಚೆ ಅಧೀಕ್ಷಕರಾದ ಶಿವಾನಂದ್ ಆರ್. ಹಿರಾಪುರ್, ಸಹಾಯಕ ಅಂಚೆ ಅಧೀಕ್ಷಕರಾದ ಶಿವಾನಂದ್ ವಂದಾಲ್ ಅವರು ಚಾಲನೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅಂಚೆ ಕಚೇರಿಯ ಪೋಸ್ಟ್ ಮಾಸ್ಟರ್ ಬಸವರಾಜ್ ಈಟಿ, ಅಂಚೆ ಕಚೇರಿಯ ಉಪ ವಿಭಾಗದ ಅಧಿಕಾರಿ ಕುಮಾರ್ ಪವರ್, ಶಿವಪಾದ ಶಿವಂಗಿ ಸೇರಿದಂತೆ ಅಂಚೆ ಕಚೇರಿಯ ಸಿಬ್ಬಂದಿ ವರ್ಗದವರು ಹಾಗೂ ಸಾರ್ವಜನಿಕರು ಭಾಗಿಯಾದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H